ಸಂಪುಟ 01 | ಸಂಚಿಕೆ 178 | ಶುಕ್ರವಾರ 22 ಮೇ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

REGIONAL KANNADA DAILY MORNING

ಸಿಂಧನೂರು, ಮಸ್ಕಿ
ಮಾನ್ವಿ, ಲಿಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ಅಂತರರಾಷ್ಟ್ರೀಯ ಜೈವಿಕ ವೈವಿಧ್ಯತೆ ದಿನ**
ಜೈವಿಕ ವೈವಿಧ್ಯತೆಯ ಸಮಸ್ಯೆಗಳ ಬಗ್ಗೆ ಅರಿವು ಮತ್ತು ತಿಳುವಳಿಕೆಯನ್ನು ಹೆಚ್ಚಿಸಲು ಪ್ರತಿ ವರ್ಷ ಮೇ 22 ರಂದು ಅಂತರರಾಷ್ಟ್ರೀಯ ಜೈವಿಕ ವೈವಿಧ್ಯತೆ ದಿನವನ್ನು ಆಚರಿಸಲಾಗುತ್ತದೆ.

**2) ರಾಜಾರಾಮ್ ಮೋಹನ್ ರಾಯ್ ರವರ ಜನ್ಮದಿನ**
ಆಧುನಿಕ ಭಾರತದ ಸಾಮಾಜಿಕ ಮತ್ತು ಧಾರ್ಮಿಕ ಸುಧಾರಕರಾದ ರಾಜಾರಾಮ್ ಮೋಹನ್ ರಾಯ್ ರವರ ಜನ್ಮದಿನ ಮೇ 22. ಅವರು 1772ರಲ್ಲಿ ಬಂಗಾಳದ ಹೂಗ್ಲಿ ಜಿಲ್ಲೆಯ ರಾಧಾನಗರದಲ್ಲಿ ಜನಿಸಿದರು. ಇವರನ್ನು 'ಆಧುನಿಕ ಭಾರತದ ಪಿತಾಮಹ' ಎಂದು ಕರೆಯಲಾಗುತ್ತದೆ

## ಸುಭಾಷಿತ

ಅಹಿಂಸಾತ್ಮಕ ವ್ಯಕ್ತಿಗೆ ಇಡೀ ಜಗತ್ತು ಒಂದು ಕುಟುಂಬ ಹೀಗಾಗಿ, ಅವನು ಯಾರಿಗೂ ಹೆದರುವುದಿಲ್ಲ ಮತ್ತು ಯಾರನ್ನೂ ಹೆದರಿಸುವುದಿಲ್ಲ.

–ಮಹಾತ್ಮ ಗಾಂಧೀಜೀ

### ಇದೇ ತಿಂಗಳ 25ರಂದು 12 ವರ್ಷ ಪೂರೈಸಲಿರುವ ಮೋದಿ ಸರ್ಕಾರ

# ಬಿಜೆಪಿಯಿಂದ ವಿವಿಧ ಕಾರ್ಯಕ್ರಮ

**ಬೆಂಗಳೂರು: ಇದೇ ತಿಂಗಳ 25ಕ್ಕೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಹಾಗೂ 26ಕ್ಕೆ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ ಸರ್ಕಾರ 12 ವರ್ಷ ಪೂರ್ಣಗೊಳಿಸುತ್ತಿರುವ ಹಿನ್ನೆಲೆಯಲ್ಲಿ ವಿವಿಧ ಕಾರ್ಯಕ್ರಮಗಳನ್ನು ಪಕ್ಷವು ಆಯೋಜಿಸಿದೆ. ರಾಷ್ಟ್ರೀಯ ಅಧ್ಯಕ್ಷರಾಗಿ ಮೊದಲ ಬಾರಿಗೆ ಬೆಂಗಳೂರಿಗೆ ನಿತಿನ್ ನಬಿನ್ ಆಗಮಿಸುತ್ತಿದ್ದು, ಯಲಹಂಕ ಸಮೀಪದ ಖಾಸಗಿ ರೆಸಾರ್ಟ್‌ನಲ್ಲಿ ಪಕ್ಷದ ಪ್ರಮುಖರೊಂದಿಗೆ ಮಹತ್ವದ ಸಭೆ ನಡೆಸಲಿದ್ದಾರೆ.**



ಇದೇ ಸಂದರ್ಭದಲ್ಲಿ ಮೋದಿ ಸರ್ಕಾರವು 26ಕ್ಕೆ 12 ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಸಾಧನೆಗಳ ಜಾಗೃತಿ ಹಾಗೂ ಫಲಾನುಭವಿಗಳ ಜೊತೆ ಸಂವಾದ ಸೇರಿದಂತೆ ಹಲವು ರೀತಿಯ ಕಾರ್ಯಕ್ರಮಗಳನ್ನು ಆಯೋಜಿಸಿದೆ. ಈ ಸಂಬಂಧ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ವಿಧಾನಸಭೆಯ ಪ್ರತಿಪಕ್ಷದ ನಾಯಕರಾದ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ, ರಾಷ್ಟ್ರೀಯ ಸಹ ಸಂಘಟನಾ ಕಾರ್ಯದರ್ಶಿ ಶಿವಪ್ರಕಾಶ್, ರಾಷ್ಟ್ರೀಯ ಉಪಾಧ್ಯಕ್ಷ ಬೈ.ಜಯಂತ್, ರಾಜ್ಯ ಉಸ್ತುವಾರಿ ಮೋಹನ್‌ದಾಸ್ ಅಗರ್‌ವಾಲ್ ಸೇರಿದಂತೆ ಮತ್ತಿತರರು ಪೂರ್ವ ಸಿದ್ಧತಾ ಕಾರ್ಯಕ್ರಮಗಳ ಬಗ್ಗೆ ಚರ್ಚೆ ನಡೆಸಿದರು.

ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಿಜಯೇಂದ್ರ, ಕಾಡುಗೊಲ್ಲ ಸಂಘದ ರಾಜ್ಯಾಧ್ಯಕ್ಷ ರಾಜಣ್ಣ ಬಿಜೆಪಿ ಸೇರ್ಪಡೆ ಆಗಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ನಾಯಕತ್ವ ಬೆಂಬಲಿಸಿ ಯಾವುದೇ ಅಪೇಕ್ಷೆ ಇಲ್ಲದೆ ಪಕ್ಷಕ್ಕೆ ಬಂದಿದ್ದಾರೆ. ಅವರನ್ನು ಆತೀಯವಾಗಿ ಬರಮಾಡಿಕೊಳ್ಳಲಾಗಿದೆ. ಮುಂದಿನ ದಿನಗಳಲ್ಲಿ ಸೂಕ್ತವಾದ ಸ್ಥಾನಮಾನ ಸಿಗಲಿದೆ ಎಂದು ಆಶ್ವಾಸನೆ ನೀಡಿದರು. ರಾಜಣ್ಣ ಹಾಗೂ ಅವರ ಬೆಂಬಲಿಗರು ಬಿಜೆಪಿ ಸೇರಿದ್ದಾರೆ. ಪಕ್ಷದಿಂದ ಅವರಿಗೆ ಖಂಡಿತವಾಗಿ ಒಳ್ಳೆಯದಾಗಲಿದೆ ಎಂದು ಹೇಳಿದರು.ಸಂಸದ ಗೋವಿಂದ ಕಾರಜೋಳ ಮಾತನಾಡಿ, ರಾಜಣ್ಣ ಸೇರ್ಪಡೆ ಆ ಭಾಗದಲ್ಲಿ ನಮಗೆ ಹೆಚ್ಚಿನ ಬಲ ತಂದಿದೆ. ಅವರ ಸ್ಥಾನಮಾನಕ್ಕೆ ತಕ್ಕಂತೆ ಪಕ್ಷವು ನಡೆಸಿಕೊಳ್ಳಲಿದೆ. ಕಾಡುಗೊಲ್ಲ ಸಮುದಾಯಕ್ಕೆ ಬಿಜೆಪಿ ಯಾವಾಗಲೂ ಬೆಂಬಲವಾಗಿಯೇ ನಿಲ್ಲುತ್ತದೆ ಎಂದರು.

## ಗುಡದೂರು, ಗೌಡನಬಾವಿ ಗ್ರಾಪಂಗೆ ತಾಪಂ ಇಒ ಅಮರೇಶ ಯಾದವ ಬೇಟಿ



**ನೈಜ್ಯ ದೇಸೆ ನ್ಯೂಸ್**

**ಮಸ್ಕಿ: ತಾಲೂಕಿನ ಗುಡದೂರು, ಗೌಡನಬಾವಿ ಗ್ರಾಮ ಪಂಚಾಯತಿಗೆ ಬುಧವಾರ ಮಸ್ಕಿ ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳಾದ ಅಮರೇಶ ಭೇಟಿ ನೀಡಿ ಕಡತಗಳನ್ನು ಪರಿಶೀಲಿಸಿದರು.**

**ಮೇ ಅಂತ್ಯದೊಳಗೆ ಆಸ್ತಿ ಸಮೀಕ್ಷೆ ಪೂರ್ಣಗೊಳಿಸಬೇಕು.**

ಸರ್ಕಾರದ ಪರಿಷ್ಕೃತ ಆದೇಶದಂತೆ ಸಾರ್ವಜನಿಕರ ಆಸ್ತಿಗಳಿಗೆ ತೆರಿಗೆ ವಿಧಿಸಬೇಕು. ನರೇಗಾ ಕೂಲಿಕಾರರಿಗೆ ನಿರಂತರವಾಗಿ ಕೆಲಸ ಒದಗಿಸಬೇಕು. ಕುಡಿಯುವ ನೀರನ್ನು ಸಮರ್ಪಕವಾಗಿ ಪೂರೈಸಬೇಕು ಎಂದು ಸೂಚಿಸಿದರು. ಗುಡದೂರು ಗ್ರಾಮದಲ್ಲಿ ಸಾರ್ವಜನಿಕ ಶೌಚಾಲಯದ ತೆರವು ಕಾರ್ಯ ವೀಕ್ಷಿಸಿದರು. ತದ ನಂತರ ಗೌಡನಬಾವಿ ಗ್ರಾಪಂಯಲ್ಲಿ ತೆರಿಗೆ ವಸೂಲಾತಿ, ಆಸ್ತಿ ಸಮೀಕ್ಷೆ, ಸಿಬ್ಬಂದಿ ಹಾಜರಾತಿ ವಹಿ ಪರಿಶೀಲಿಸಿದರು. ಗೌಡನಬಾವಿ ಗ್ರಾಮದಲ್ಲಿ ನರೇಗಾದಡಿ ಕೈಗೊಂಡಿರುವ ಚರಂಡಿ ಕಾಮಗಾರಿಯನ್ನು ವೀಕ್ಷಿಸಿದರು. ಅದೇ ರೀತಿ, ಮಸ್ಕಿ ತಾಲೂಕಿನ ಅಂಕುಶದೊಡ್ಡಿ ಗ್ರಾಮ ಪಂಚಾಯತಿಯ ಅಂಕುಶದೊಡ್ಡಿ ಗ್ರಾಮದ ಸಂನ್ಯಾಸಿನಿ ಕೆರೆ ಹೂಳು ಎತ್ತುವ ಕಾಮಗಾರಿ ಸ್ಥಳಕ್ಕೆ ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಅಮರೇಶ್ ಸರ್ ಭೇಟಿ ನೀಡಿ ಕೂಲಿಕಾರರೊಂದಿಗೆ ಸಂವಾದ ನಡೆಸಿದರು. ಕೂಲಿಕಾರರಿಗೆ ಪೂರೈಸಿದ ಕುಡಿಯುವ ನೀರನ್ನು ಕುಡಿದು, ಗುಣಮಟ್ಟ ಪರಿಶೀಲಿಸಿದರು.

ಕೆಲಸದ ಅವಧಿ, ಕೂಲಿಕಾರರೊಂದಿಗೆ ಮಾಹಿತಿ ಪಡೆದರು. ಈ ವೇಳೆ,ಈ ವೇಳೆ ಸಹಾಯಕ ನಿರ್ದೇಶಕರಾದ (ಪಂ.ರಾ) ಸೋಮನಗೌಡ ಪಾಟೀಲ್, ವಸಂತ ಗೀತಾ, ಗ್ರಾಪಂ ಸಿಬ್ಬಂದಿ, ಅಂಕುಶದೊಡ್ಡಿ ಗ್ರಾಪಂ ಅಭಿವೃದ್ಧಿ ಅಧಿಕಾರಿಗಳಾದ ಭುವನೇಶ್ವರಿ, ತಾಂತ್ರಿಕ ಸಹಾಯಕ ಅಭಿಯಂತರರು, ಐಇಸಿ ಸಂಯೋಜಕರು,ಬಿಎಫ್ಟಿ, ಗ್ರಾಪಂ ಸಿಬ್ಬಂದಿ ಉಪಸ್ಥಿತರಿದ್ದರು.

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ಪೂರ್ವ ವಸತಿ ನಿಲಯಗಳಿಗೆ ಅರ್ಜಿ ಆಹ್ವಾನ

**ನೈಜ್ಯ ದೇಸೆ ನ್ಯೂಸ್**

**ರಾಯಚೂರು: ರಾಯಚೂರು ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2026-27ನೇ ಸಾಲಿಗೆ ಮೆಟ್ರಿಕ್ ಪೂರ್ವ ವಸತಿ ನಿಲಯಗಳಿಗೆ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಆಸಕ್ತ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿ ಸಲ್ಲಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಕಲ್ಯಾಣಾಧಿಕಾರಿಗಳು ಕೋರಿದ್ದಾರೆ.**

Department of Health & Family Welfare

ಮೆಟ್ರಿಕ್ ಪೂರ್ವ ಬಾಲಕ ಅಥವಾ ಬಾಲಕಿಯರ ವಸತಿ ನಿಲಯಗಳಿಗೆ ಪ್ರವೇಶಕ್ಕಾಗಿ ಹೊಸದಾಗಿ ಬಯಸುವ ಪ್ರವರ್ಗ-1, ಎಎಸ್.ಸಿ & ಎಸ್,ಟಿ ಜಾತಿಯ ವಿದ್ಯಾರ್ಥಿಯ ಆದಾಯಯು 2.50 ಲಕ್ಷ ರೂ. ಹಾಗೂ ಪ್ರವರ್ಗ-2ಎ, 2ಬಿ, 3ಎ 3ಬಿ ಇತರೆ ಜಾತಿಯ ವಿದ್ಯಾರ್ಥಿಯ ಆದಾಯಯು 1. ಲಕ್ಷ ರೂ. ಒಳಗಿರುವವರು ಇಲಾಖೆಯ ವೆಬ್‌ಸೈಟ್ ವಿಳಾಸ: https://shp.karnataka.gov.in ನಲ್ಲಿ ಜೂನ್ 08ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ತಾಲೂಕುವಾರು ವಿದ್ಯಾರ್ಥಿಗಳ ವಿವರ ಹಾಗೂ ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ ವಿಳಾಸ: https://shp.karnataka.gov.in ನ್ನು ನೋಡಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ವೆಬ್‌ಸೈಟ್ ವಿಳಾಸ: bcwd.hostels@karnataka.gov.in ಗೆ ಇ-ಮೇಲ್ ಮುಖಾಂತರ ಅಥವಾ ತಾಲೂಕ ಕಲ್ಯಾಣಾಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರಾಯಚೂರು ದೂರವಾಣಿ ಸಂಖ್ಯೆ: 08532-221072ಗೆ ಸಂಪರ್ಕ ಮಾಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ತಾಲೂಕ ಕಲ್ಯಾಣಾಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿ.ಜಿ ಕುಲ್ಕರ್ಣಿ ಅಸ್ಪತ್ರೆ ಹತ್ತಿರ ಅನೀರಿಕ್ಷಿತ ಮನೆ ಅಜಾದ್ ನಗರ ಕಾಲೋನಿ ರಾಯಚೂರು, ದೂರವಾಣಿ ಸಂ: 08532-221072ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬುದ್ಧ ಶಾಂತಿ ರಾಷ್ಟ್ರೀಯ ಪ್ರಶಸ್ತಿ ಪಡೆದ ಸಿಂಧನೂರಿನ ಯುವಕ ಮಂಜೂರ ಹುಸೇನ್

**ನೈಜ್ಯ ದೇಸೆ ನ್ಯೂಸ್**

**ಗೋವಾ: ಗೋವಾ ರಾಜ್ಯದ ರಾಜಧಾನಿ ಪಣಜಿಯಲ್ಲಿ ಇದೇ ತಿಂಗಳ 24ರಂದು ಮಧ್ಯಾಹ್ನ 1:00 ಗಂಟೆಗೆ ನಡೆಯಲಿರುವ ಕದಂಬ ಫೌಂಡೇಶನ್ ವತಿಯಿಂದ ಹಮ್ಮಿಕೊಳ್ಳಲಾದ "ಸುವರ್ಣ ಫೋಕಸ್ ಪ್ರತಿಕೆಯ ವಾರ್ಷಿಕೋತ್ಸವ" ಸಮಾರಂಭದಲ್ಲಿ ಸಮಾಜಸೇವೆ ಹಾಗೂ ಯುವ ನಾಯಕತ್ವ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿರುವ ಯುವ ಸಮಾಜಸೇವಕ ಶ್ರೀ ಮಂಜೂರ ಹುಸೇನ್ ಅವರನ್ನು ಬುದ್ಧ ಶಾಂತಿ ರಾಷ್ಟ್ರೀಯ ಪ್ರಶಸ್ತಿ'ಯನ್ನು ನೀಡಿ ಗೌರವಪೂರ್ವಕವಾಗಿ ಸನ್ಮಾನಿಸಲಾಗುತ್ತಿದೆ.**



ಶ್ರೀ ಮಂಜೂರ ಹುಸೇನ್ ಅವರು ಅನೇಕ ವರ್ಷಗಳಿಂದ ಯುವ ಕಾಂಗ್ರೆಸ್‌ನಲ್ಲಿ ಸಕ್ರಿಯವಾಗಿ ಸೇವೆ ಸಲ್ಲಿಸುತ್ತಿದ್ದು, ಬಡ ಹಾಗೂ ಮಧ್ಯಮ ವರ್ಗದ ಜನರ ಪರವಾಗಿ ಹಲವಾರು ಸಮಾಜಮುಖಿ ಕಾರ್ಯಗಳನ್ನು ನಿರಂತರವಾಗಿ ಮಾಡುತ್ತಿದ್ದಾರೆ. ತಿಪ್ಪನಹಟ್ಟಿ ಎಂಬ ಸಣ್ಣ ಹಳ್ಳಿಯಿಂದ ದಿಲ್ಲಿವರೆಗೆ ಸಂಚರಿಸಿ ಅನೇಕ ಗಣ್ಯ ನಾಯಕರು ಹಾಗೂ ರಾಜಕೀಯ ಮುಖಂಡರನ್ನು ಭೇಟಿಯಾಗಿ ತಮ್ಮ ಸಾಮಾಜಿಕ ಕಾಳಜಿಯನ್ನು ವ್ಯಕ್ತಪಡಿಸಿರುವ ಅವರು ಯುವಕರಿಗೆ ಮಾದರಿಯಾಗಿದ್ದಾರೆ.

ಸರಳತೆ, ಸಜ್ಜನಿಕೆ ಹಾಗೂ ಜನಪರ ಚಿಂತನೆ ಹೊಂದಿರುವ ಶ್ರೀ ಮಂಜೂರ ಹುಸೇನ್ ಅವರು ಯುವ ಮುಖಂಡರಾದ ಹಾರೂನ್ ಸಾಹೇಬ್ ಜಾಗೀರ್ದಾರ ಅವರ ಆಪ್ತ ಕಾರ್ಯದರ್ಶಿಯಾಗಿ ಕೂಡ ಸೇವೆ ಸಲ್ಲಿಸುತ್ತಿದ್ದು, ಸಮಾಜದಲ್ಲಿ ತಮ್ಮದೇ ಆದ ಗೌರವವನ್ನು ಗಳಿಸಿದ್ದಾರೆ. ಅವರ ಸಮಾಜಸೇವೆ, ಯುವ ನಾಯಕತ್ವ ಹಾಗೂ ಜನಪರ ಕಾರ್ಯಗಳನ್ನು ಗುರುತಿಸಿ ಈ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಪ್ರಶಸ್ತಿಗಳು ಹಾಗೂ ಗೌರವಗಳು ಅವರಿಗೆ ಲಭಿಸಲಿ ಎಂದು ಸ್ನೇಹಿತರು, ಅಭಿಮಾನಿಗಳು ಹಾಗೂ ಸಾರ್ವಜನಿಕರು ಹಾರೈಸಿದ್ದಾರೆ.

ಕಾರ್ಯಕ್ರಮದಲ್ಲಿ ವಿವಿಧ ಗಣ್ಯರು, ಸಮಾಜ ಸೇವಕರು ಹಾಗೂ ಸಾರ್ವಜನಿಕರು ಭಾಗವಹಿಸಲಿದ್ದು, ಈ ಸನ್ಮಾನ ಸಮಾರಂಭವು ಅರ್ಥಪೂರ್ಣವಾಗಿ ನಡೆಯಲಿದೆ ಎಂದು ಆಯೋಜಕರಾದ ಮಾರುತಿ ಬಡಿಗೇರ್ ಆಯೋಜಕರು ಮತ್ತು ಹಿರಿಯ ಪತ್ರಕರ್ತರು. ಅಲಂ ಫನಿ ಸಂಪಾದಕರು ಸುವರ್ಣ ಫೋಕಸ್ ಕನ್ನಡ ದಿನಪತ್ರಿಕೆ ಇವರು ಪತ್ರಿಕಾ ಪ್ರಕಟಣೆ ಯಲ್ಲಿ ತಿಳಿಸಿದ್ದಾರೆ. ಈ ಪ್ರಶಸ್ತಿಗೆ ಆಯ್ಕೆಯಾಗಿದ್ದಕ್ಕೆ ಯುವ ಮುಖಂಡರಾದ ಹಾರೂನ್ ಸಾಹೇಬ್ ಜಾಗೀರ್ದಾರ, ಶಫಿಯುಲ್ಲಾ ಖಾನ್ ಸಾಬ್,ನಿಸಾರ್ ಖಾನ್ ಸಾಬ್, ಮೌಲಾಸಾಬ್,ಖಾಜಾ ಬನ್ನಿಗನೂರು ಹಾಗೂ ಅನೇಕ ಮುಖಂಡರು ಹರ್ಷ ವ್ಯಕ್ತಪಡಿಸಿದ್ದಾರೆ.

## ಭಯೋತ್ಪಾದನಾ ವಿರೋಧಿ ದಿನಾಚರಣೆ ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ

**ನೈಜ್ಯ ದೇಸೆ ನ್ಯೂಸ್**

**ಸಿಂಧನೂರು: ಜಿಲ್ಲಾಡಳಿತ ಜಿಲ್ಲಾ ಪಂಚಾಯತ ಜಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರ ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾ ಇವರ ಸಂಯುಕ್ತ ಆಶ್ರಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಭಯೋತ್ಪಾದನಾ ವಿರೋಧಿ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.**



ಕಾರ್ಯಕ್ರಮದ ಕುರಿತು ಮಾತನಾಡಿದ ಮಾತನಾಡಿದ ವೈದ್ಯಾಧಿಕಾರಿಗಳಾದ ಡಾಕ್ಟರ ಪ್ರೀತಾ ಅವರು ಯುವಕರನ್ನು ಹಿಂಸಾಚಾರ ಮತ್ತು ಭಯೋತ್ಪಾದನೆಯಿಂದ ದೂರ ಇಡುವುದು . ದೇಶದಲ್ಲಿ ಶಾಂತಿ ಸೌಹಾರ್ದತೆ ಮತ್ತು ಏಕತೆಯನ್ನು ರೂಪಿಸುವುದು ಈ ದಿನಾಚರಣೆ ಉದ್ದೇಶವಾಗಿದೆ ಎಂದರು.

ನಂತರ ಮಾತನಾಡಿದ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಪ್ರತಿ ವರ್ಷ ಮೇ 21ರಂದು ಭಾರತದಲ್ಲಿ ಭಯೋತ್ಪಾದನೆ ವಿರೋಧಿ ದಿನವನ್ನು ಆಚರಣೆ ಮಾಡಲಾಗುತ್ತದೆ. ಭಾರತದ ಮಾಜಿ ಪ್ರಧಾನಿ ರಾಜೀವ್ ಗಾಂಧಿಯವರ ಅವರು 1991 ಮೇ 21 ರಂದು ಭಯೋತ್ಪಾದನಾ ದಾಳಿಗೆ ಬಲಿಯಾದ ದಿನವನ್ನು ಅವರ ತ್ಯಾಗದ ಸ್ಮರಣೆಗಾಗಿ ಆಚರಣೆ ಮಾಡಲಾಗುತ್ತದೆ.

ಈ ದಿನದಂದು ಶಾಲೆ ಕಾಲೇಜು ಹಾಗೂ ಸರಕಾರಿ ಕಚೇರಿಗಳಲ್ಲಿ ಭಯೋತ್ಪಾದನೆಯ ವಿರೋಧಿ ದಿನದ ಪ್ರತಿಜ್ಞಾವಿಧಿಯನ್ನು ಸ್ವೀಕರಿಸಲಾಗುತ್ತದೆ ಭಯೋತ್ಪಾದನಾ ವಿರೋಧಿ ದಿನದ ಪ್ರತಿಜ್ಞೆಯನ್ನು ಬಾಲಪ್ಪ ನಾಯಕ ಬೋಧಿಸಿದರು. ಅಹಿಂಸೆ ಮತ್ತು ಸಹನೆಗೆ ಹೆಸರಾದ ನಮ್ಮ ರಾಷ್ಟ್ರದ ಭವ್ಯ ಪರಂಪರೆಯಲ್ಲಿ ದೃಢ ವಿಶ್ವಾಸವುಳ್ಳ ಭಾರತದ ಪ್ರಜೆಗಳಾದ ನಾವು ಎಲ್ಲಾ ಬಗೆಯ ಭಯೋತ್ಪಾದನೆ ಮತ್ತು ಅಹಿಂಸೆಯನ್ನು ನಮ್ಮೆಲ್ಲರ ಶಕ್ತಿ ಸಾಮರ್ಥ್ಯದಿಂದ ಎದುರಿಸುತ್ತೇವೆ ಎಂದು ಈ ಮೂಲಕ ಶ್ರದ್ಧಾಪೂರ್ವಕವಾಗಿ ಪ್ರತಿಜ್ಞೆ ಮಾಡುತ್ತೇವೆ. ನಮ್ಮ ಸಹ ಬಾಂಧವರಲ್ಲಿ ಶಾಂತಿ ಸಾಮಾಜಿಕ ಸೌಹಾರ್ದತೆ ಮತ್ತು ಪರಸ್ಪರ ಅರಿವುವನ್ನೂ ಸಾಧಿಸಲು ಹಾಗೂ ಉತ್ತೇಜಿಸಲು ಮತ್ತು ಮಾನವ ಜೀವಕ್ಕೆ ಹಾಗೂ ಮೌಲ್ಯಗಳಿಗೆ ಬೆದರಿಕೆ ಒಡ್ಡುತ್ತಿರುವ ವಿಧ್ವಂಸಕಾರಿ ಶಕ್ತಿಗಳ ವಿರುದ್ಧ ಹೋರಾಡಲು ಪಣತೊಡುತ್ತೇವೆ ಎಂದು ಪ್ರತಿಜ್ಞಾವಿಧಿಯನ್ನು ಬೋಧಿಸಿದರು.

ಈ ಸಂದರ್ಭದಲ್ಲಿ ಸಮುದಾಯ ಆರೋಗ್ಯ ಅಧಿಕಾರಿಗಳಾದ ಅನುಶೋಯಾ . ಶೋಭಾ .ಮೇರಿ . ಹಾಗೂ ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿಗಳಾದ ನಿಂಗಮ್ಮ.. ರಾಧಾ ಆರೋಗ್ಯ ನಿರೀಕ್ಷಣಾ ಅಧಿಕಾರಿಗಳಾದ. ಮಹೇಶ. ಅಂಬಮ್ಮ. ಉದಯಕುಮಾರ. ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

ಸತ್ಯ

ಸತ್ಯವೆಂಬ ದೀಪ ಬೆಳಗಿದರೆ,
ಸುಳ್ಳಿನ ನೆರಳು ಓಡಿಹೋಗುತ್ತದೆ.
ನೇರ ದಾರಿಯಲ್ಲಿ ನಡೆದವನಿಗೆ,
ಜಗವೇ ತಲೆಬಾಗಿ ನಿಂತುಕೊಳ್ಳುತ್ತದೆ.

ಸತ್ಯದ ಮಾತು ಕಹಿಯಾದರೂ,
ಅದರೊಳಗೆ ಅಮೃತವಿದೆ.
ಮನದಾಳದಲ್ಲಿ ನಂಬಿಕೆ ಇದ್ದರೆ,
ಜೀವನದಲ್ಲಿ ಜಯವಿದೆ.

ಸತ್ಯವೇ ಧರ್ಮದ ಆಧಾರ,
ಸತ್ಯವೇ ಬದುಕಿನ ಶಕ್ತಿ.
ಸತ್ಯ ಹಿಡಿದ ಹೃದಯದಲ್ಲಿ,
ಎಂದಿಗೂ ನೆಲೆಸುವುದು ಭಕ್ತಿ.

ಅಮರೇಶ್

# ಭಯೋತ್ಪಾದನಾ ವಿರೋಧಿ ದಿನಾಚರಣೆ ಇಂದಿರಾ ನಗರ, ಬಡೀಬೇಸ್

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಜಿಲ್ಲಾಡಳಿತ ಜಿಲ್ಲಾ ಪಂಚಾಯತ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಯಚೂರು ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರು, ಹಾಗೂ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಇವರ ಸಂಯುಕ್ತ ಆಶ್ರಯದಲ್ಲಿ ಇಂದಿರಾ ನಗರದ ವ್ಯಾಪ್ತಿಗೆ ಬರುವ ಬಡೀಬೇಸ್ ಏರಿಯಾದಲ್ಲಿ ಭಯೋತ್ಪಾದನಾ ವಿರೋಧಿ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.**

ಕಾರ್ಯಕ್ರಮದ ಕುರಿತು ಮಾತನಾಡಿದ ವೈದ್ಯಾಧಿಕಾರಿಗಳಾದ ಡಾ. ಮೇರಿ ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಅವರು ಯುವಕರನ್ನು ಹಿಂಸಾಚಾರ ಮತ್ತು ಭಯೋತ್ಪಾದನೆಯಿಂದ ದೂರ ಇಡುವುದು . ಸಮಾಜದ ಒಳತಿಗೆ ದೇಶದಲ್ಲಿ ಶಾಂತಿ ಸೌಹಾರ್ದತೆ ಮತ್ತು ಏಕತೆಯನ್ನು ರೂಪಿಸುವುದು ಈ ದಿನಾಚರಣೆ ಉದ್ದೇಶವಾಗಿದೆ ಎಂದರು. ರಾಷ್ಟೀಯ ಡೆಂಗ್ಯೂ ದಿನಾಚರಣೆಯ ಕುರಿತು ಸಾರ್ವಜನಿಕರಿಗೆ ಸಾಕ್ರಾಮಿಕ ರೋಗಗಳ



ಬಗ್ಗೆ ಸವಿವರವಾಗಿ ಮಾಹಿತಿ ನೀಡಿದರು.

ನಂತರ ಮಾತನಾಡಿದ ಶ್ರೀಮತಿ ಗೀತಾ ಹಿರೇಮಠ್ ಕ್ಷೇತ್ರ ಆರೋಗ್ಯಾಶಿಕ್ಷಣಾಧಿಕಾರಿಗಳು ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಿಂಧನೂರು, ಪ್ರತಿ ವರ್ಷ ಮೇ 21ರಂದು ಭಾರತದಲ್ಲಿ ಭಯೋತ್ಪಾದನೆ ವಿರೋಧಿ ದಿನವನ್ನು ಆಚರಣೆ ಮಾಡಲಾಗುತ್ತದೆ. ಭಾರತದ ಮಾಜಿ ಪ್ರಧಾನಿ ರಾಜೀವ್ ಗಾಂಧಿಯವರ ಅವರು 1991 ಮೇ 21 ರಂದು ಭಯೋತ್ಪಾದನಾ ದಾಳಿಗೆ ಬಲಿಯಾದ ದಿನವನ್ನು ಅವರ ತ್ಯಾಗದ ಸ್ಮರಣೆಗಾಗಿ ಆಚರಣೆ ಮಾಡಲಾಗುತ್ತದೆ. ಈ ದಿನದಂದು ಶಾಲೆ ಕಾಲೇಜು ಹಾಗೂ ಸರಕಾರಿ ಕಚೇರಿಗಳಲ್ಲಿ ಭಯೋತ್ಪಾದನೆಯ ವಿರೋಧಿ ದಿನದ ಪ್ರತಿಜ್ಞಾವಿಧಿಯನ್ನು ಸ್ವೀಕರಿಸಲಾಗುತ್ತದೆ ಭಯೋತ್ಪಾದನಾ ವಿರೋಧಿ ದಿನದ ಪ್ರತಿಜ್ಞೆಯನ್ನು ಬೋಧಿಸಿಲಾಯಿತು.

ಅಹಿಂಸೆ ಮತ್ತು ಸಹನೆಗೆ ಹೆಸರಾದ ನಮ್ಮ ರಾಷ್ಟ್ರದ ಭವ್ಯ ಪರಂಪರೆಯಲ್ಲಿ ದೃಢ ವಿಶ್ವಾಸವುಳ್ಳ ಭಾರತದ ಪ್ರಜೆಗಳಾದ ನಾವು ಎಲ್ಲಾ ಬಗೆಯ ಭಯೋತ್ಪಾದನೆ ಮತ್ತು ಅಹಿಂಸೆಯನ್ನು ನಮ್ಮೆಲ್ಲರ ಶಕ್ತಿ ಸಾಮಥ್ರ್ಯದಿಂದ ಎದುರಿಸುತ್ತೇವೆ ಎಂದು ಈ ಮೂಲಕ ಶ್ರದ್ಧಾಪೂರ್ವಕವಾಗಿ ಪ್ರತಿಜ್ಞೆ ಮಾಡುತ್ತೇವೆ. ನಮ್ಮ ಸಹ ಬಾಂಧವರಲ್ಲಿ ಶಾಂತಿ ಸಾಮಾಜಿಕ ಸೌಹಾರ್ದತೆ ಮತ್ತು ಪರಸ್ಪರ ಅರಿವುವನ್ನೂ ಸಾಧಿಸಲು ಹಾಗೂ ಉತ್ತೇಜಿಸಲು ಮತ್ತು ಮಾನವ ಜೀವಕ್ಕೆ ಹಾಗೂ ಮೌಲ್ಯಗಳಿಗೆ ಬೆದರಿಕೆ ಒಡ್ಡುತ್ತಿರುವ ವಿದ್ರಚ್ಛಿದ್ರಕಾರಿ ಶಕ್ತಿಗಳ ವಿರುದ್ಧ ಹೋರಾಡಲು ಪಣತೊಡುತ್ತೇವೆ ಎಂದು ಪ್ರತಿಜ್ಞಾವಿಧಿಯನ್ನು ಬೋಧಿಸಿದರು. ಈ ಸಂದರ್ಭದಲ್ಲಿ ಶಮಿನಾ ಬೇಗಂ ಕಆಊಅಔ, ಹಾಗೂ ಸೈನಜ, ವಾಣಿ, ಮೆರೂನ್, ವಿಜಯಲಕ್ಷ್ಮಿ ಆಶಾ ಕಾರ್ಯಕರ್ತೆಯರು, ಪರ್ವೀನಿಸ, ಅಂಗನವಾಡಿ ಕಾರ್ಯಕರ್ತೆಯರು, ಸಾವಿತ್ರಿ ಅಂಗನವಾಡಿ ಸಹಾಯಕಿ, ಗರ್ಭಿಣಿ ಹಾಗೂ ತಾಯಂದಿರು ಹಾದಿಹರೆಯದ ಮಕ್ಕಳು ಉಪಸ್ಥಿತರಿದ್ದರು.

# ಮೇ 31ರಂದು ಬೆಂಗಳೂರಿನಲ್ಲಿ ವಿಶ್ವಕರ್ಮ ಸಮಾಜದ ವಿದ್ಯಾರ್ಥಿಗಳಿಗೆ ರಾಜ್ಯ ಮಟ್ಟದ ಪ್ರತಿಭಾ ಪುರಸ್ಕಾರ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ (ರಿ), ಬೆಂಗಳೂರು ವತಿಯಿಂದ 2025–26 ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಶೇ.75ಕ್ಕಿಂತ ಹೆಚ್ಚು ಅಂಕ ಪಡೆದ ವಿಶ್ವಕರ್ಮ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ರಾಜ್ಯ ಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಮೇ 31ರಂದು ಬೆಂಗಳೂರಿನ ಟೌನ್ ಹಾಲ್ (ಪುಟ್ಟಣ್ಣ ಚೆಟ್ಟಿ ಭವನ) ನಲ್ಲಿ ಹಮ್ಮಿಕೊಳ್ಳಲಾಗಿದೆ.**



ಎಂದು ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ (ರಿ) ಮಾನ್ವಿ ತಾಲೂಕು ಅಧ್ಯಕ್ಷ ಕೆ. ಅಮರನಾಥ ತಿಳಿಸಿದ್ದಾರೆ. ಮಾಜಿ ವಿಧಾನ ಪರಿಷತ್ ಸದಸ್ಯರು ಹಾಗೂ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾದ ರಾಜ್ಯಾಧ್ಯಕ್ಷ ಕೆ.ಪಿ. ನಂಜುಂಡಿ ವಿಶ್ವಕರ್ಮ ಅವರ ಸಾರಥ್ಯದಲ್ಲಿ ಕಾರ್ಯಕ್ರಮ ನಡೆಯಲಿದ್ದು, ರಾಯಚೂರು ಜಿಲ್ಲೆ ಸೇರಿದಂತೆ ರಾಜ್ಯದ ಎಲ್ಲಾ ಜಿಲ್ಲೆಗಳ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳುವಂತೆ ಅವರು ಮನವಿ ಮಾಡಿದ್ದಾರೆ.

ಕಾರ್ಯಕ್ರಮದಲ್ಲಿ ಭಾಗವಹಿಸಲು ಇಚ್ಛಿಸುವ ವಿದ್ಯಾರ್ಥಿಗಳು ಮೇ 23ರೊಳಗಾಗಿ ಎಸ್‌ಎಸ್‌ಎಲ್‌ಸಿ/ಪಿಯುಸಿ ಅಂಕಪಟ್ಟಿ, ಜಾತಿ ಪ್ರಮಾಣ ಪತ್ರ, ವರ್ಗಾವಣೆ ಪ್ರಮಾಣ ಪತ್ರ ಹಾಗೂ ಭಾವಚಿತ್ರವನ್ನು ಮೊಬೈಲ್ ಸಂಖ್ಯೆ 9886423935ಕ್ಕೆ ವಾಟ್ಸ್‌ಆಪ್ ಮೂಲಕ ಕಳುಹಿಸಬೇಕೆಂದು ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳು ಸಲ್ಲಿಸಿದ ದಾಖಲಾತಿಗಳ ಜೆರಾಕ್ಸ್ ಪ್ರತಿಗಳನ್ನು ಕಡ್ಡಾಯವಾಗಿ ತರಬೇಕೆಂದು ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾದ ತಾಲೂಕು ಅಧ್ಯಕ್ಷ ಕೆ. ಅಮರನಾಥ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆರೋಗ್ಯ ಇಲಾಖೆಯಿಂದ ವಿವಿಧ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಿವಿಧ ಆರೋಗ್ಯ ಸಂಸ್ಥೆಗಳಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳು ಮತ್ತು ವಿವಿಧ ತಜ್ಞ ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ರೋಷ್ಟರ್ ಕಂ ಮೆರಿಟ್ ಅನುಸರಿಸಿ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ.**

Department of Health & Family Welfare

ಸ್ತ್ರೀ ರೋಗ ತಜ್ಞರು 6 ಹುದ್ದೆಗಳಿಗೆ (ಎಂಬಿಬಿಎಸ್, ಡಿ.ಜಿ.ಓ/ಎಂ.ಎಸ್ ಓಬಿಜಿ/ಡಿಎನ್ ಬಿ.ಓಬಿಜಿ), ಅರವಳಿಕೆ ತಜ್ಞರು 10 ಹುದ್ದೆಗಳಿಗೆ (ಎಂಬಿಬಿಎಸ್, ಡಿಪ್ಲೋಮಾ ಅನಸ್ಥೀಷಿಯಾ, ಎಂ.ಡಿ ಅನಸ್ಥೀಷಿಯಾ, ಡಿ.ಎನ್.ಬಿ ಅನಸ್ಥೀಷಿಯಾ), ಮಕ್ಕಳ ತಜ್ಞರು 4 ಹುದ್ದೆಗಳಿಗೆ (ಎಂ.ಬಿ.ಬಿ.ಎಸ್, ಡಿ.ಸಿ.ಹೆಚ್, ಎಂ.ಡಿ ಪೀಡಿಯಾಟ್ರಿಕ್, ಡಿ.ಎನ್.ಬಿ ಪೀಡಿಯಾಟ್ರಿಕ್), ಜನರಲ್ ಮೆಡಿಸನ್ 2 ಹುದ್ದೆಗಳಿಗೆ (ಎಂಬಿಬಿಎಸ್, ಎಂಡಿ ಜನರಲ್ ಮೆಡಿಸನ್), ಕಿವಿ ಮೂಗು ಗಂಟಲು ತಜ್ಞರು 2 ಹುದ್ದೆಗಳಿಗೆ (ಡಿಪ್ಲೋಮಾ ಇ.ಎನ್.ಟಿ, ಎಂ.ಡಿ ಇ.ಎನ್.ಟಿ), ಚರ್ಮರೋಗ ತಜ್ಞರು 1 ಹುದ್ದೆಗೆ (ಎಂಬಿಬಿಎಸ್, ಡಿವಿಡಿ, ಎಂಡಿ ಡರ್ಮಟಾಲೊಜಿ), ರೇಡಿಯೊಲಾಜಿಸ್ಟ್ 2 ಹುದ್ದೆಗೆ (ಡಿಪ್ಲೋಮಾ ಇನ್ ರೇಡಿಯಾಲಜಿ, ಎಂ.ಡಿ ರೇಡಿಯಾಲೊಜಿ), ತುರ್ತು ಚಿಕಿತ್ಸಾ ವೈದ್ಯಾಧಿಕಾರಿಗಳು 7 ಹುದ್ದೆಗಳಿಗೆ (ಎಂಬಿಬಿಎಸ್), ವೈದ್ಯಾಧಿಕಾರಿಗಳು 20 ಹುದ್ದೆಗಳಿಗೆ (ಎಂ.ಬಿಬಿಎಸ್) ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಮೇ. 27ರಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯಲ್ಲಿ ನಡೆಯುವ ವಾಕ್ ಇನ್ ಇಂಟರವೀವ್ ಭಾಗವಹಿಸಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಲ್ಕು ದಿನದಲ್ಲಿ ಬಂಧಿಸದಿದ್ದರೆ ಬಳಗಾನೂರಲ್ಲಿ ಉಗ್ರ ಹೋರಾಟ

## ಬಳಗಾನೂರಿನಲ್ಲಿ ವಿಶ್ವ ಹಿಂದೂ ಪರಿಷತ್ ಹಾಗೂ ಬಜರಂಗದಳದಿಂದ ಪೊಲೀಸರಿಗೆ ತೀವ್ರ ಎಚ್ಚರಿಕೆ.

ನೈಜ್ಯ ದೆಸೆ ನ್ಯೂಸ್

**ಬಳಗಾನೂರು: ಪಟ್ಟಣದ ಐತಿಹಾಸಿಕ ಬಂಧು ಶತಪುರೇಶ ಆಂಜನೇಯ ದೇವಸ್ಥಾನ ಆವರಣದಿಂದ ಕಳುವಾಗಿರುವ ಅಪರೂಪದ ಗಣೇಶ ಮೂರ್ತಿ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶ್ವ ಹಿಂದೂ ಪರಿಷತ್ ಹಾಗೂ ಬಜರಂಗದಳ ಬಳಗಾನೂರು ಘಟಕದ ವತಿಯಿಂದ ಶುಕ್ರವಾರ ಬೆಳಿಗ್ಗೆ ಪಟ್ಟಣದ ಮಾರುತಿ–ದೇವಸ್ಥಾನದ ಆವರಣದಲ್ಲಿ ಭಜರಂಗದಳ ಮತ್ತು ವಿಶ್ವ ಹಿಂದೂ ಪರಿಷತ್ತಿನ ವತಿಯಿಂದ ಪಟ್ಟಣದ ಹಿರಿಯರ ಪ್ರಮುಖರ ಸಭೆಯನ್ನು ಕರೆದು ತೀವ್ರ ಆಕ್ರೋಶ ವ್ಯಕ್ತಪಡಿಸಲಾಯಿತು.**



ಪೊಲೀಸರ ನಿರ್ಲಕ್ಷ್ಯ ಧೋರಣೆ ಹಾಗೂ "ಕಾಣದ ಕೈಗಳ" ಸಂಚಿನಿಂದ ಈ ದುಷ್ಕೃತ್ಯ ನಡೆದಿದೆ ಎಂದು ಆರೋಪಿಸಿದ ಮುಖಂಡರು, ಪ್ರಕರಣದ ತನಿಖೆಯನ್ನು ಇನ್ನಷ್ಟು ಚುರುಕುಗೊಳಿಸಿ ಕಿಡಿಗೇಡಿಗಳನ್ನು ಶೀಘ್ರ ಬಂಧಿಸಬೇಕೆಂದು ಆಗ್ರಹಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಬಜರಂಗದಳದ ರಾಯಚೂರು ಜಿಲ್ಲಾ ಕಾರ್ಯದರ್ಶಿ ರಾಕೇಶ್ ಪಾಟೀಲ್ ಅವರು, "ನಾಲ್ಕು ದಿನಗಳೊಳಗೆ ಪ್ರಕರಣದ ಬಗ್ಗೆ ಸ್ಪಷ್ಟ ಮಾಹಿತಿ ನೀಡಿ ಆರೋಪಿಗಳನ್ನು ಬಂಧಿಸಬೇಕು. ಇಲ್ಲವಾದರೆ ಬಳಗಾನೂರಿನ ಸಮಸ್ತ ಬಂಧು ಶತಪುರೇಶ ಭಕ್ತರನ್ನು ಒಗ್ಗೂಡಿಸಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು" ಎಂದು ಪೊಲೀಸರಿಗೆ ಖಡಕ್ ಎಚ್ಚರಿಕೆ ನೀಡಿದರು.

ಇದೇ ವೇಳೆ ಎ.ಬಿ.ವಿ.ಪಿ.ಮುಖಂಡ ನಿರುಪಾದಿ ಎಂ.ಬಿ. ಹೋರಾಟಗಾರ ಮೌನೇಶ್ ಡಿ.ಎಸ್.ಎಸ್, ಮಾತನಾಡಿ, ದೇವಸ್ಥಾನದ ಭಕ್ತರ ಭಾವನೆಗಳಿಗೆ ಧಕ್ಕೆ ತಂದಿರುವ ಈ ಕೃತ್ಯವನ್ನು ಪೊಲೀಸರು ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಮಧುಸೂದನ್ನ ಪಟವಾರಿ ಕಾರ್ಯಕ್ರಮವನ್ನು ನಿರ್ವಹಿಸಿದರು ವಿಶ್ವ ಹಿಂದೂ ಪರಿಷತ್ ಹಾಗೂ ಬಜರಂಗದಳದ ಅನೇಕ ಕಾರ್ಯಕರ್ತರು,ಅಸಂಖ್ಯಾತ ಭಕ್ತರು ಉಪಸ್ಥಿತರಿದ್ದು, ದೇವಸ್ಥಾನದ ಪಾವಿತ್ರ್ಯತೆಯನ್ನು ಕಾಪಾಡುವ ಸಂಕಲ್ಪದೊಂದಿಗೆ ನ್ಯಾಯಕ್ಕಾಗಿ ಹೋರಾಟ ಮುಂದುವರಿಸುವುದಾಗಿ ಹೇಳಿದರು. ವರದಿ: ಸುರೇಶ ಬಳಗಾನೂರು

## ಅಬಕಾರಿ ಇಲಾಖೆಯಿಂದ ದಾಳಿ: ರೈಲ್ವೇ ನಿಲ್ದಾಣದಲ್ಲಿ 25 ಲೀಟರ್ ಸೇಂಧಿ ವಶಕ್ಕೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಯಚೂರು ಅಬಕಾರಿ ಉಪ ವಿಭಾಗದ ಉಪ ಅಧೀಕ್ಷಕರರು ಹಾಗೂ ಅಬಕಾರಿ ರಾಯಚೂರು ವಲಯ ನೀರಿಕ್ಷಕರ ನೇತೃತ್ವದಲ್ಲಿ ಮೇ.20ರ ಬುಧವಾರ ದಂದು ರಾಯಚೂರಿನ ರೈಲ್ವೇ ನಿಲ್ದಾಣದಲ್ಲಿ ಗಸ್ತು ಮಾಡುತ್ತಿರುವ ಸಮಯದಲ್ಲಿ ಖಚಿತ ಮಾಹಿತಿ ಮೇರೆಗೆ ದಾಳಿ ಮಾಡಿ ಕಮಲೇಶ್ ತಂದೆ ಈಶಪ್ಪ ಎಂಬ ಆರೋಪಿಯನ್ನು ವಶಕ್ಕೆ ಪಡೆದು ಪ್ರಕರಣ ದಾಖಲು ಮಾಡಿಕೊಳ್ಳಲಾಗಿದೆ ಎಂದು ಅಬಕಾರಿ ಇಲಾಖೆಯು ತಿಳಿಸಿದೆ.**



ದಾಳಿಯ ವೇಳೆಯಲ್ಲಿ ಸುಮಾರು 25 ಲೀಟರ್ ಸೇಂಧಿ ಪತ್ತೆಯಾಗಿದ್ದು, ಸೇಂಧಿಯನ್ನು ವಶಕ್ಕೆ ಪಡೆಯಲಾಗಿದೆ. ಆರೋಪಿಯು ರಾಯಚೂರಿನ ಅಂಬೇಡ್ಕರ್ ನಗರದ ನಿವಾಸಿಯಾಗಿದ್ದು, ಆರೋಪಿ ಕಮಲೇಶ್ ತಂದೆ ಈಶಪ್ಪ ಎಂಬುವವನ ಮೇಲೆ ಸ್ಥಳದಲ್ಲಿಯೇ ಪಂಚನಾಮೆ ಅಡಿಯಲ್ಲಿ ಅಬಕಾರಿ ಉಪ ನಿರೀಕ್ಷಕರು–1ವಲಯ ರಾಯಚುರು ಅವರು ಪ್ರಕರಣ ದಾಖಲು ಮಾಡಿಕೊಂಡು ಕಾನೂನು ಕ್ರಮ ಕೈಗೊಳ್ಳಲಾಗಿದೆ. ದಾಳಿಯಲ್ಲಿ ಅಬಕಾರಿ ನಿರೀಕ್ಷಕ ಮೋನಪ್ಪ, ಅಬಕಾರಿ ಉಪ ನಿರೀಕ್ಷಕ–01 ಅಮೃತ ಬಿಂದು ಸೇರಿದಂತೆ ಇಲಾಖೆಯ ವಿವಿಧ ಅಧಿಕಾರಿ, ಸಿಬ್ಬಂದಿಗಳು ಇದ್ದರು ಎಂದು ಅಬಕಾರಿ ಇಲಾಖೆಯ ಪ್ರಕಟಣೆ ತಿಳಿಸಿದೆ.

# ಆನ್ಲೈನ್ ಮೂಲಕ ಔಷಧಿ ಮಾರಾಟ ತಡೆಯುವಂತೆ ಆಗ್ರಹಿಸಿ ಪ್ರತಿಭಟನೆ




ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಆನ್ಲೈನ್ ಮೂಲಕ ಔಷಧಿ ಮಾರಾಟ ಮಾಡುವ ವ್ಯವಸ್ಥೆಯನ್ನು ವಿರೋಧಿಸುವುದು ಹಾಗೂ ಕಾರ್ಪೊರೇಟ ಕಂಪನಿಗಳಿಂದ ಅತಿಯಾದ ರಿಯಾಯತಿಯನ್ನು ತಡೆಗಟ್ಟುವಂತೆ ಆಗ್ರಹಿಸಿ ಅಖಿಲ ಭಾರತ ಔಷಧ ವ್ಯಾಪಾರಸ್ಥರ ಸಂಘ ಹಾಗೂ ಕರ್ನಾಟಕ ರಾಜ್ಯ ಔಷಧ ವ್ಯಾಪಾರಸ್ಥರ ಸಂಘವು ಕರೆದ ಔಷಧ ಅಂಗಡಿಗಳ ಬಂದ್ ಗೆ ಬೆಂಬಲಿಸಿ ಪಟ್ಟಣದ ಔಷಧ ವ್ಯಾಪಾರಸ್ಥರ ಸಂಘದ ವತಿಯಿಂದ ಬುಧವಾರ ಔಷಧಿ ಅಂಗಡಿಗಳನ್ನು ಬಂದ್ ಮಾಡಿ ಪ್ರತಿಭಟನೆ ನಡೆಸಲಾಯಿತು.**

ಪ್ರತಿಭಟನೆಯಲ್ಲಿ ಫಾರ್ಮಾಸಿಷ್ಟಗಳು ಹಾಗೂ ಔಷದ ವ್ಯಾಪಾರಸ್ಥರು ಕೈಯಲ್ಲಿ ಬ್ಯಾನರ್, ಹ್ಯಾಂಡ್ ಪೋಸ್ಟರ್ ಹಿಡಿದು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಿದರು. ಪಟ್ಟಣದ ಕತ್ರಿ ಬಜಾರ್ ನಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆಯು ಬಾಲಾಜಿ ಮಂದಿರ ರಸ್ತೆ, ವಿಠಲ ಮಂದಿರ ರಸ್ತೆ, ಶಿವಾಜಿ ವೃತ್ತ, ಮಹಾರಾಣಾ ಪ್ರತಾಪ್ ಸಿಂಹ ವೃತ್ತ, ಬಸ್ ನಿಲ್ದಾಣ ಮಾರ್ಗವಾಗಿ ಶ್ರೀ ಬಸವೇಶ್ವರ ವೃತ್ತದ ವರೆಗೆ ಸಾಗಿತು. ಈ ವೇಳೆ ಆನ್ಲೈನ್ ಔಷಧಿ ಮಾರಾಟವನ್ನು ತಕ್ಷಣ ನಿಲ್ಲಿಸಬೇಕು ಎಂದು ಪ್ರತಿಭಟನಾಕಾರರು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಸಂಘದ ಪದಾಧಿಕಾರಿಗಳು ಕರೋನಾ ಸಂದರ್ಭದಲ್ಲಿ ಜನರ ಅನುಕೂಲಕ್ಕಾಗಿ ಆನ್ ಲೈನ್ ಔಷಧ ಮಾರಾಟಕ್ಕೆ ಅವಕಾಶ ನೀಡಲಾಗಿತ್ತು ಆದರೆ ಈಗಲೂ ಅದೇ ವ್ಯವಸ್ಥೆ ಮುಂದುವರೆದಿದ್ದು ಯಾವುದೇ ಕಟ್ಟುನಿಟ್ಟಿನ ನಿಯಮಗಳಿಲ್ಲದೆ ಔಷಧಿಗಳನ್ನು ಮಾರಾಟ ಮಾಡಲಾಗುತ್ತಿದೆ ಎಂದು ಆರೋಪಿಸಿದರು. ಇನ್ನೂ ಕೆಲ ನಿಷೇಧಿತ ಹಾಗೂ ನಿಯಂತ್ರಿತ ಔಷಧಿಗಳನ್ನು ಆನ್ಲೈನ್ ಮೂಲಕ ಮಾರಾಟ ಮಾಡಲಾಗುತ್ತಿದೆ ಸ್ಥಳೀಯ ಔಷಧ ಅಂಗಡಿಗಳಿಗೆ ಮಾತ್ರ ಕಠಿಣ ನಿಯಮಗಳು ಜಾರಿಯಲ್ಲಿದ್ದರೆ ಆನ್ಲೈನ್ ಮಾರಾಟಕ್ಕೆ ಯಾವುದೇ ಕಡಿವಾಣ ಇಲ್ಲದಿರುವುದು ಅನ್ಯಾಯ ಎಂದು ವ್ಯಾಪಾರಸ್ಥರು ಅಸಮಾಧಾನ ವ್ಯಕ್ತಪಡಿಸಿದರು.

ಆನ್ಲೈನ್ ಔಷಧ ಮಾರಾಟಕ್ಕೆ ಸ್ಪಷ್ಟ ನೀತಿ ನಿಯಮ ರೂಪಿಸಿ ಸಾರ್ವಜನಿಕರ ಆರೋಗ್ಯದ ಹಿತ ದೃಷ್ಟಿಯಿಂದ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿ ತಾಲೂಕ ಆಡಳಿತಕ್ಕೆ ಮನವಿ ಸಲ್ಲಿಸಿದರು. ಪ್ರತಿಭಟನಾ ಮೆರವಣಿಗೆಯಲ್ಲಿ ಔಷಧ ವ್ಯಾಪಾರಸ್ಥರ ಸಂಘದ ಅಧ್ಯಕ್ಷ ಸುಭಾಸ ಸಾಲಂಕಿ, ಉಪಾಧ್ಯಕ್ಷ ಸಂತೋಷ ಪ್ರಥಮಶೆಟ್ಟಿ, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯ ವಾಸುದೇವ ಹೆಬಸೂರ, ಸಂಘದ ಸದಸ್ಯರಾದ ರವಿ ಪಾಟೀಲ, ರಮೇಶ ಸಾಲಂಕಿ, ಮೈನುದ್ದೀನ ಕೊರ್ತಿ, ಅಜೀತ ಬಳಗಾನೂರ, ಲಕ್ಷ್ಮಿಕಾಂತ್ ಸಜ್ಜನ,ಬಾಗೇವಾಡಿ, ಶಿವಲಿಂಗಪ್ಪ ಸಾಲಂಕಿ, ಅಬೂಬಕರ ಅಸ್ಕಿ, ಮೈನು ಮೊಕಾಶಿ, ಬಬ್ಲು ಬಳಗಾರ,ಜಮಾದಾರ,ಬೇಪಾರಿ, ಅರ್ಸಲಾನ್ ಅಬಾಲೆ ಮತ್ತಿತರರು ಇದ್ದರು.

# ಯಶಸ್ವಿಯಾಗಿ ಮುಕ್ತಾಯಗೊಂಡ 10ನೇ ತರಗತಿ ವಿದ್ಯಾರ್ಥಿಗಳ ಬೇಸಿಗೆ ತರಬೇತಿ ಶಿಬಿರ

ನೈಜ್ಯ ದೆಸೆ ನ್ಯೂಸ್

**ಮಾನ್ವಿ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಘಟಕ ಹಾಗೂ ತಾಲೂಕು ವೀರಶೈವ ಲಿಂಗಾಯತ ಸಮಾಜದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 10ನೇ ತರಗತಿ ವಿದ್ಯಾರ್ಥಿಗಳ ವಿಶೇಷ ಬೇಸಿಗೆ ತರಬೇತಿ ಶಿಬಿರ ಯಶಸ್ವಿಯಾಗಿ ಮುಕ್ತಾಯಗೊಂಡಿತು.**

ಪಟ್ಟಣದ ಸಿದ್ದಾರ್ಥ ಪದವಿ ಪೂರ್ವ ಕಾಲೇಜಿನಲ್ಲಿ ನಡೆದ ಎರಡು ತಿಂಗಳ ಶಿಬಿರದಲ್ಲಿ ಕನ್ನಡ ಹಾಗೂ ಇಂಗ್ಲಿಷ್ ಮಾಧ್ಯಮದ ಒಟ್ಟು 138 ವಿದ್ಯಾರ್ಥಿಗಳು ಭಾಗವಹಿಸಿ ತರಬೇತಿ ಪಡೆದರು. ವಿಷಯವಾರು ನುರಿತ ಶಿಕ್ಷಕರು ಹಾಗೂ ಸಂಪನ್ಮೂಲ ವ್ಯಕ್ತಿಗಳಿಂದ ವಿದ್ಯಾರ್ಥಿಗಳಿಗೆ ವಿಶೇಷ ತರಬೇತಿ ಮತ್ತು ಮಾರ್ಗದರ್ಶನ ನೀಡಲಾಯಿತು.



ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲೂಕು ಘಟಕದ ಅಧ್ಯಕ್ಷ ಅರುಣ ಕುಮಾರ್ ಚಂದಾ ಮಾತನಾಡಿ, ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಈ ಶಿಬಿರವನ್ನು ಆಯೋಜಿಸಲಾಗಿತ್ತು.

ತರಬೇತಿ ಯಶಸ್ವಿಯಾಗಲು ಸ್ಥಳಾವಕಾಶ ಕಲ್ಪಿಸಿದ ತಿಪ್ಪಣ್ಣ ಬಾಗಲವಾಡ ಅವರಿಗೆ ವಿಶೇಷ ಧನ್ಯವಾದಗಳನ್ನು ಸಲ್ಲಿಸಿದರು. ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಹಾಗೂ ಸ್ಪರ್ಧಾತ್ಮಕ ಮನೋಭಾವ ಬೆಳೆಸುವಲ್ಲಿ ಶಿಬಿರ ಪ್ರಮುಖ ಪಾತ್ರ ವಹಿಸಿದೆ ಎಂದು ಹೇಳಿದರು. ಶಿಬಿರದಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿನಿ ಅಪ್ಸರಾ ಅಭಿಪ್ರಾಯ ವ್ಯಕ್ತಪಡಿಸಿ, "ವಿದ್ಯಾರ್ಥಿ ಜೀವನದಲ್ಲಿ 10ನೇ ತರಗತಿ ಅತ್ಯಂತ ಮಹತ್ವದ ಘಟ್ಟವಾಗಿದೆ. ಶಾಲೆಯ ಪಾಠಗಳ ಜೊತೆಗೆ ವಿಶೇಷ ತರಬೇತಿಯೂ ಬಹಳ ಮುಖ್ಯ. ಆದರೆ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ದುಡ್ಡು ಕೊಟ್ಟು ತರಬೇತಿ ಪಡೆಯುವುದು ಕಷ್ಟಕರವಾಗುತ್ತದೆ.

ಇಂತಹ ಸಂದರ್ಭದಲ್ಲಿ ಸಮಾಜದ ವತಿಯಿಂದ ಉಚಿತವಾಗಿ ಆಯೋಜಿಸಲಾದ ಈ ಬೇಸಿಗೆ ಶಿಬಿರ ನಮ್ಮಂತಹ ವಿದ್ಯಾರ್ಥಿಗಳಿಗೆ ತುಂಬಾ ಉಪಯುಕ್ತವಾಗಿದೆ. ಇಲ್ಲಿ ದೊರೆತ ಮಾರ್ಗದರ್ಶನದಿಂದ ಪರೀಕ್ಷೆ ಎದುರಿಸುವ ಆತ್ಮವಿಶ್ವಾಸ ಹೆಚ್ಚಾಗಿದೆ" ಎಂದು ಸಂತಸ ವ್ಯಕ್ತಪಡಿಸಿದರು. ವಿದ್ಯಾರ್ಥಿನಿ ಕಾವ್ಯ ಮಾತನಾಡಿ, "ಶಿಬಿರದಲ್ಲಿ ಸುಸಜ್ಜಿತ ಕಟ್ಟಡ, ಉತ್ತಮ ಕಲಿಕಾ ವಾತಾವರಣ ಹಾಗೂ ಅನುಭವಿಗಳಾದ ತರಬೇತಿದಾರರಿಂದ ಗುಣಮಟ್ಟದ ತರಬೇತಿ ದೊರೆತಿದ್ದು, ವಿದ್ಯಾರ್ಥಿಗಳಿಗೆ ಇದು ಅತ್ಯಂತ ಸಹಕಾರಿಯಾಗಿದೆ" ಎಂದು ಹೇಳಿದರು.

ಈ ಸಂದರ್ಭದಲ್ಲಿ ತಾಲೂಕ ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಹರಿಹರ ಪಾಟೀಲ್, ಕಾರ್ಯಾಧ್ಯಕ್ಷ ಶ್ರೀಧರಸ್ವಾಮಿ ಹಿರೇಕೊಟ್ನೆಕಲ್, ಉಪಾಧ್ಯಕ್ಷರಾದ ವೀರನಗೌಡ, ಪ್ರಧಾನ ಕಾರ್ಯದರ್ಶಿ ಜಗದೀಶ್ ಓತೂರು, ಸಂಗಾಪುರ, ಪ್ರದೀಪ ಪಾಟೀಲ್, ಶರಣಪ್ಪ ಮಾಸ್ತರ್, ಹೊಯ್ಸಳ ಸ್ವಾಮಿ ಸೇರಿದಂತೆ ಸಮಾಜದ ಪದಾಧಿಕಾರಿಗಳು ಹಾಗೂ ತರಬೇತುದಾರರು ಉಪಸ್ಥಿತರಿದ್ದರು.


# ನೇಮಕಾತಿ ಪ್ರಕಟಣೆ

ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಉಳಿಕೆ ಮೂಲ ವೃಂದದಲ್ಲಿ ಖಾಲಿಯಿರುವ ಗ್ರೂಪ್-ಸಿ ವೃಂದದ ನೇರ ನೇಮಕಾತಿ ಹುದ್ದೆಗಳನ್ನು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.ನೇರ ನೇಮಕಾತಿ ಹುದ್ದೆಗಳ ವಿವರ... ಯುಜಿಸಿ ಮಾನ್ಯತೆ ಹೊಂದಿರುವ ಪರಿಗಣಿತ ವಿಶ್ವವಿದ್ಯಾಲಯಗಳು, ಖಾಸಗಿ / ಡೀಮ್ಡ್ ಹಾಗೂ ಹೊರ ರಾಜ್ಯದ ವಿಶ್ವವಿದ್ಯಾಲಯಗಳಿಂದ ಪಡೆದ ಪದವಿಗಳು. ಆದರೆ (equivalence of degree) ಬಗ್ಗೆ ಶಿಕ್ಷಣಕ್ಕೆ ಸಂಬಂಧಿಸಿದಂತೆ ಉದ್ಯೋಗ ನೀಡುವ ಪ್ರಾಧಿಕಾರ ತೀರ್ಮಾನ ತೆಗೆದುಕೊಳ್ಳಲಿದೆ.ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ 20.05.2026. ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 03.06.2026 ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ 04.06.2026 ರಂದು 4.00 ರೊಳಗೆ ಅರ್ಜಿ ಸಲ್ಲಿಸುವ ವಿಧಾನ:- https://cetonline.karnataka.gov.in/kea/ನೀಡಲಾಗುವ ಲಿಂಕ್ ಅನ್ನು ಆಯ್ಕೆ ಮಾಡಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಭರ್ತಿ ಮಾಡಬೇಕು. ಒಮ್ಮೆ ಸಲ್ಲಿಸಿದ ಅರ್ಜಿಯಲ್ಲಿನ ಯಾವುದೇ ಮಾಹಿತಿಯನ್ನು ಯಾವುದೇ ಹಂತದಲ್ಲಿ ಬದಲಾವಣೆ /ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ. ಅಭ್ಯರ್ಥಿಗಳು ಎಚ್ಚರಿಕೆಯಿಂದ ಅಧಿಸೂಚನೆಯನ್ನು ಓದಿ ಅರ್ಥೈಸಿಕೊಂಡು ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ.

# ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಮೀಸಲಾತಿ ಕಾಯ್ದೆ ಪ್ರಸ್ತಾವನೆಗೆ ಕೇಂದ್ರದ ಸ್ಪಂದನೆಗೆ ಸಂಸದರ ಜಿ ಕುಮಾರ ನಾಯಕರವರಿಂದ ಸ್ವಾಗತ

ನೈಜ್ಯ ದೆಸೆ ನ್ಯೂಸ್

**ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ಶಿಕ್ಷಣ ಸಂಸ್ಥೆಗಳಲ್ಲಿನ ಸ್ಥಾನಗಳು ಮತ್ತು ರಾಜ್ಯದ ಸೇವೆಗಳಲ್ಲಿನ ನೇಮಕಾತಿಗಳು ಅಥವಾ ಹುದ್ದೆಗಳ ಮೀಸಲಾತಿ) ಕಾಯ್ದೆಯನ್ನು ಸಂವಿಧಾನದ ಒಂಬತ್ತನೇ ಪರಿಚ್ಛೇದಕ್ಕೆ ಸೇರಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ ಎಂದು ಕೇಂದ್ರ ಸರ್ಕಾರ ಒಪ್ಪಿಕೊಂಡಿರುವುದನ್ನು ರಾಯಚೂರು ಸಂಸದ ಜಿ. ಕುಮಾರ್ ನಾಯಕ ಸ್ವಾಗತಿಸಿದ್ದಾರೆ.**



ಮಂಗಳವಾರ ಇಲ್ಲಿ ಬಿಡುಗಡೆ ಮಾಡಿದ ಪತ್ರಿಕಾ ಪ್ರಕಟಣೆಯಲ್ಲಿ ಸಂಸದ ಜಿ ಕುಮಾರ ನಾಯಕ ಅವರು, ಕರ್ನಾಟಕದ ಎಸ್‌ಸಿ, ಎಸ್‌ಟಿ ಮೀಸಲಾತಿ ಕಾಯ್ದೆಯನ್ನು ಒಂಬತ್ತನೇ ಪರಿಚ್ಛೇದದಲ್ಲಿ ಸೇರಿಸುವುದು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಒದಗಿಸಲಾದ ಸಾಂವಿಧಾನಿಕ ರಕ್ಷಣೆಗಳನ್ನು ರಕ್ಷಿಸಲು ಅತ್ಯಗತ್ಯ ಎಂದು ಹೇಳಿದ್ದಾರೆ. "ವಿಷಯವು ಪರಿಶೀಲನೆಯಲ್ಲಿದೆ ಎಂದು ಕೇಂದ್ರ ಸರ್ಕಾರ ಒಪ್ಪಿಕೊಂಡಿರುವುದನ್ನು ನಾನು ಸ್ವಾಗತಿಸುತ್ತೇನೆ ಮತ್ತು ಸೂಕ್ತ ಸಾಂವಿಧಾನಿಕ ರಕ್ಷಣೆ ಖಚಿತವಾಗುವವರೆಗೆ ನಾನು ಈ ವಿಷಯವನ್ನು ಬಲವಾಗಿ ಮುಂದುವರಿಸುತ್ತೇನೆ" ಎಂದು ಅವರು ತಿಳಿಸಿದ್ದಾರೆ.

ಸಲ್ಲಿಸಿದ ಪ್ರಸ್ತಾವನೆಯನ್ನು ಇಲಾಖೆಯು ಸ್ವೀಕರಿಸಿದ್ದು, ಪ್ರಸ್ತುತ ಪರಿಶೀಲನೆಯಲ್ಲಿದೆ ಎಂದು ಮೇ 8 ರಂದು ಲಿಖಿತ ಪತ್ರದ ಮೂಲಕ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ವೀರೇಂದ್ರ ಕುಮಾರ್ ಅವರು ತಮಗೆ ತಿಳಿಸಿದ ನಂತರ ಸಂಸದ ಜಿ ಕುಮಾರ ನಾಯಕ ಅವರ ಈ ಪ್ರತಿಕ್ರಿಯೆ ಬಂದಿದೆ. ಕಾಯ್ದೆಯ ಪ್ರಸ್ತುತ ಕಾನೂನು ಸ್ಥಿತಿ ಮತ್ತು ಅದರ ಸಿಂಧುತ್ವಕ್ಕೆ ಸಂಬಂಧಿಸಿದ ನ್ಯಾಯಾಂಗ ನಡಾವಳಿಗಳ ವಿವರಗಳು ಸೇರಿದಂತೆ ನವೀಕೃತ ಮಾಹಿತಿಗಳನ್ನು ಪಡೆಯಲು ಈ ವಿಷಯವನ್ನು ಗೃಹ ಸಚಿವಾಲಯದೊಂದಿಗೆ ಚರ್ಚಿಸಲಾಗಿದೆ ಎಂದು ಕೇಂದ್ರ ಸಚಿವರು ಪತ್ರದಲ್ಲಿ ತಿಳಿಸಿದ್ದಾರೆ. ಪ್ರಕ್ರಿಯೆಯನ್ನು ವೇಗಗೊಳಿಸಲು ಇತ್ತೀಚೆಗೆ ಮತ್ತೊಮ್ಮೆ ಜ್ಞಾಪನಾ ಪತ್ರವನ್ನು ಕಳುಹಿಸಲಾಗಿದೆ ಎಂದು ಪತ್ರದಲ್ಲಿ ತಿಳಿಸಲಾಗಿದೆ.

ಮಾಹಿತಿಯ ಪ್ರಕಾರ, ಈ ವಿಷಯವು ಪ್ರಮುಖ ಸಾಂವಿಧಾನಿಕ ಮತ್ತು ಕಾನೂನು ಪರಿಗಣನೆಗಳನ್ನು ಒಳಗೊಂಡಿರುವುದರಿಂದ, ಅಂತಿಮ ನಿರ್ಧಾರ ತೆಗೆದುಕೊಳ್ಳುವ ಮೊದಲು ವಿವಿಧ ಸಚಿವಾಲಯಗಳ ನಡುವಿನ ಸೂಕ್ಷ್ಮ ಪರಿಶೀಲನೆಯ ಅಗತ್ಯವಿದೆ. ಪ್ರಸ್ತಾವನೆಯನ್ನು ಪರಿಶೀಲಿಸುವಾಗ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿ ರಕ್ಷಣೆಗೆ ಸಂಬಂಧಿಸಿದ ಕಳಕಳಿಗಳನ್ನು ಗಮನದಲ್ಲಿಟ್ಟುಕೊಳ್ಳಲಾಗುವುದು ಎಂದು ಕೇಂದ್ರ ಸರ್ಕಾರ ಭರವಸೆ ನೀಡಿದೆ. ಸದರಿ ಪ್ರಯತ್ನದಲ್ಲಿ ಕರ್ನಾಟಕದ ಎಲ್ಲ ಸಂಸದರು ಸೇರಿ ಪ್ರಯತ್ನ ಪಡುವುದು ಅಗತ್ಯ ಎಂದು ಸಂಸದ ಜಿ ಕುಮಾರ ನಾಯಕ ರವರು ತಿಳಿಸಿದ್ದಾರೆ.

ಇದಕ್ಕೂ ಮುನ್ನ ರಾಜ್ಯದ ಆರು ಕಾಂಗ್ರೆಸ್ ಲೋಕಸಭಾ ಸದಸ್ಯರಾದ ಇ. ತುಕಾರಾಂ, ಪ್ರಿಯಾಂಕಾ ಜಾರಕಿಹೊಳಿ, ರಾಜಶೇಖರ್ ಹಿಟ್ನಾಳ್, ಪ್ರಭಾ ಮಲ್ಲಿಕಾರ್ಜುನ್ ಮತ್ತು ಸುನಿಲ್ ಬೋಸ್ ಅವರು ಜಂಟಿಯಾಗಿ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ಶಿಕ್ಷಣ ಸಂಸ್ಥೆಗಳಲ್ಲಿನ ಸ್ಥಾನಗಳು ಮತ್ತು ರಾಜ್ಯದ ಸೇವೆಗಳಲ್ಲಿನ ನೇಮಕಾತಿಗಳು ಅಥವಾ ಹುದ್ದೆಗಳ ಮೀಸಲಾತಿ) ಕಾಯ್ದೆ 2022 ಅನ್ನು ಒಂಬತ್ತನೇ ಪರಿಚ್ಛೇದದಲ್ಲಿ ಸೇರಿಸುವಂತೆ ಕೇಂದ್ರವನ್ನು ಒತ್ತಾಯಿಸಿದ್ದರು.

ಹೆಚ್ಚಿಸಲಾದ ಮೀಸಲಾತಿ ನೀತಿಯನ್ನು ಕಾನೂನು ಸವಾಲುಗಳಿಂದ ರಕ್ಷಿಸಲು ಮತ್ತು ರಾಜ್ಯದ ಎಸ್‌ಸಿ, ಎಸ್‌ಟಿ ಸಮುದಾಯಗಳಿಗೆ ಮೀಸಲಾತಿ ಸೌಲಭ್ಯಗಳ ಪರಿಣಾಮಕಾರಿ ಅನುಷ್ಠಾನವನ್ನು ಖಚಿತಪಡಿಸಿಕೊಳ್ಳಲು ಸಂವಿಧಾನದ 31(ಃ) ಮತ್ತು 31(ಅ) ವಿಧಿಗಳ ಅಡಿಯಲ್ಲಿ ಶಾಸನವನ್ನು ಸೇರಿಸುವುದು ಅಗತ್ಯ ಎಂದು ಸಂಸದರು ವಾದಿಸಿದ್ದರು

# ವಿಶ್ವ ಸಂಸ್ಥೆಯಲ್ಲಿ ಉಗ್ರರ ರಾಷ್ಟ್ರ ಪಾಕಿಸ್ತಾನದ ಕಳಂಕಿತ ಇತಿಹಾಸ ಬಿಚ್ಚಿಟ್ಟ ಭಾರತ

ನೈಜ್ಯ ದೆಸೆ ನ್ಯೂಸ್

**ವಿಶ್ವಸಂಸ್ಥೆ: ಭಾರತ ವಿಶ್ವಸಂಸ್ಥೆಯ ಭದ್ರತಾ ಮಂಡಳಿ ಸಭೆಯಲ್ಲಿ ಪಾಕಿಸ್ತಾನದ ಜನಾಂಗಹತ್ಯೆಯ ಕಳಂಕಿತ ಇತಿಹಾಸವನ್ನು ತೀವ್ರವಾಗಿ ಟೀಕಿಸಿದೆ. ತನ್ನ ಆಂತರಿಕ ವೈಫಲ್ಯಗಳನ್ನು ಮರೆಮಾಚಲು ಪಾಕಿಸ್ತಾನ ಹಲವು ದಶಕಗಳಿಂದ ದೇಶದೊಳಗೂ, ಗಡಿಭಾಗದಾಚೆಯೂ ಹಿಂಸಾತ್ಮಕ ಕೃತ್ಯಗಳನ್ನು ನಡೆಸುತ್ತಿದೆ ಎಂದು ಭಾರತ ಆರೋಪಿಸಿದೆ.**




ಸಶಸ್ತ್ರ ಸಂಘರ್ಷಗಳಲ್ಲಿ ನಾಗರಿಕರ ರಕ್ಷಣೆಯ ಕುರಿತ ವಾರ್ಷಿಕ ಮುಕ್ತ ಚರ್ಚೆಯಲ್ಲಿ ಮಾತನಾಡಿದ ವಿಶ್ವಸಂಸ್ಥೆಯಲ್ಲಿನ ಭಾರತದ ಶಾಶ್ವತ ಪ್ರತಿನಿಧಿ ಹರೀಶ್ ಪರ್ವತನೇನಿ ಅವರು ಜನಾಂಗಹತ್ಯೆಯ ದೀರ್ಘಕಾಲದ ಕಳಂಕಿತ ದಾಖಲೆ ಹೊಂದಿರುವ ಪಾಕಿಸ್ತಾನವು ,ಭಾರತಕ್ಕೆ ಸಂಬಂಧಿಸಿದ ಆಂತರಿಕ ವಿಚಾರಗಳನ್ನು ಪ್ರಸ್ತಾಪಿಸುತ್ತಿರುವುದು ವಿಪರ್ಯಾಸಎಂದು ಹೇಳಿದ್ದಾರೆ. ಈ ಚರ್ಚೆಯಲ್ಲಿ ಪಾಕಿಸ್ತಾನ ಪ್ರತಿನಿಧಿಯು ಜಮು ಮತ್ತು ಕಾಶ್ಮೀರ ವಿಷಯವನ್ನು ಪ್ರಸ್ತಾಪಿಸಿದ ಬಳಿಕ ಅವರು ಈ ಪ್ರತಿಕ್ರಿಯೆ ನೀಡಿದ್ದಾರೆ. ಈ ವರ್ಷದ ಆರಂಭದಲ್ಲಿ ಪಾಕಿಸ್ತಾನ ಅಫ್ಘಾನಿಸ್ತಾನದ ಮೇಲೆ ನಡೆಸಿದ ದಾಳಿಯ ವಿಷಯವನ್ನೂ ಅವರು ಪ್ರಸ್ತಾಪಿಸಿದರು.ಈ ವರ್ಷದ ಮಾರ್ಚ್‌ನಲ್ಲಿ ರಮಝಾನ್ ಪವಿತ್ರ ತಿಂಗಳ ಸಂದರ್ಭದಲ್ಲಿ, ಶಾಂತಿ ಮತ್ತು ಪ್ರಾರ್ಥನೆಯ ಸಮಯದಲ್ಲಿ ಪಾಕಿಸ್ತಾನವು ಕಾಬೂಲ್‌ನ ಓಮಿದ್ ವ್ಯಸನ ಚಿಕಿತ್ಸಾಆಸ್ಪತ್ರೆಯ ಮೇಲೆ ಅಮಾನವೀಯ ವೈಮಾನಿಕ ದಾಳಿ ನಡೆಸಿತ್ತು ಎಂಬುದನ್ನು ಜಗತ್ತು ಮರೆತಿಲ್ಲಎಂದು ಅವರು ಹೇಳಿದರು. ಅಫ್ಘಾನಿಸ್ತಾನದಲ್ಲಿ ವಿಶ್ವಸಂಸ್ಥೆಯ ಸಹಾಯ ನಿಯೋಗ ವರದಿ ಪ್ರಕಾರ, ಆ ದಾಳಿಯಲ್ಲಿ 269 ನಾಗರಿಕರು ಸಾವನ್ನಪ್ಪಿದ್ದು, 122 ಮಂದಿ ಗಾಯಗೊಂಡಿದ್ದರು ಎಂದು ತಿಳಿಸಲಾಗಿದೆ. ಅದೇ ವೇಳೆ, ಅಂತರರಾಷ್ಟ್ರೀಯ ಕಾನೂನು ಮತ್ತು ಮಾನವ ಹಕ್ಕುಗಳ ಕುರಿತು ಉನ್ನತ ತತ್ವಗಳನ್ನು ಮಾತನಾಡುವ ಪಾಕಿಸ್ತಾನವು ನಿರಪರಾಧಿಗಳ ಮೇಲೆ ದಾಳಿ ನಡೆಸುವುದು ಕಪಟತನ ಎಂದು ಭಾರತ ಆರೋಪಿಸಿದೆ. 1971ರಲ್ಲಿ ನಡೆದ ಅಪರೇಷನ್ ಸರ್ಚ್‌ಲೈಟ್ ಸಂದರ್ಭದಲ್ಲೂ ಪಾಕಿಸ್ತಾನ ಸೇನೆ ನಡೆಸಿದ ಸಾಮೂಹಿಕ ಅತ್ಯಾಚಾರ ಮತ್ತು ಹಿಂಸಾಚಾರವನ್ನು ಟೀಕಿಸಿದೆ. ಇಂತಹ ಅಮಾನವೀಯ ನಡೆಗಳು, ತನ್ನ ವೈಫಲ್ಯಗಳನ್ನು ಮರೆಮಾಚಲು ಪಾಕಿಸ್ತಾನ ಹಲವು ದಶಕಗಳಿಂದ ನಡೆಸುತ್ತಿರುವ ಹಿಂಸಾತ್ಮಕ ಕ್ರಮಗಳ ಪ್ರತಿಬಿಂಬವಾಗಿದೆ. ಜಗತ್ತು ಈಗ ಪಾಕಿಸ್ತಾನದ ಪ್ರಚಾರ ತಂತ್ರವನ್ನು ಗುರುತಿಸಿದೆ ಎಂದು ಅವರು ಹೇಳಿದರು.

# ಜಾಲಹಳ್ಳಿ ಪೊಲೀಸ್ ಠಾಣೆ ಉದ್ಘಾಟನೆ ಆಹ್ವಾನ ಪತ್ರಿಕೆಯಲ್ಲಿ ಶಿಷ್ಟಾಚಾರ ಉಲ್ಲಂಘನೆ ಆರೋಪ

ನೈಜ್ಯ ದೆಸೆ ನ್ಯೂಸ್

**ಜಾಲಹಳ್ಳಿ: ದಿನಾಂಕ 22-05-2026ರಂದು ನಡೆಯಲಿರುವ ಜಾಲಹಳ್ಳಿ ಪೊಲೀಸ್ ಠಾಣೆ ಉದ್ಘಾಟನಾ ಕಾರ್ಯಕ್ರಮದ ಆಹ್ವಾನ ಪತ್ರಿಕೆಯಲ್ಲಿ ಶಿಷ್ಟಾಚಾರ ಉಲ್ಲಂಘನೆ ನಡೆದಿದೆ ಎಂದು ಜಾಲಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶ್ರೀಮತಿ ವಿಜಯಲಕ್ಷ್ಮಿ ವೆಂಕೋಬ ತೋಟದ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.**



ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಗ್ರಾಮ ಪಂಚಾಯಿತಿ ಅಧ್ಯಕ್ಷರ ಅವಧಿ ಇನ್ನೂ 9 ತಿಂಗಳು ಬಾಕಿ ಇದ್ದರೂ ಸಹ, ಉದ್ಘಾಟನಾ ಸಮಾರಂಭದ ಆಹ್ವಾನ ಪತ್ರಿಕೆಯಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಕಾರ್ಯಕ್ರಮದ ಅಧ್ಯಕ್ಷ ಸ್ಥಾನ ನೀಡದೆ ಅತಿಥಿ ಸ್ಥಾನ ನೀಡಿರುವುದು ಜಾಲಹಳ್ಳಿ ಗ್ರಾಮ ಪಂಚಾಯಿತಿಗೆ ಹಾಗೂ ಗ್ರಾಮಸ್ಥರಿಗೆ ಅವಮಾನ ಮಾಡಿದಂತಾಗಿದೆ ಎಂದು ಆರೋಪಿಸಿದ್ದಾರೆ. ಈ ಕುರಿತು ಪ್ರತಿಕ್ರಿಯೆ ನೀಡಿದ ಸ್ಥಳೀಯ ಮುಖಂಡರು, ಇದೇ ಪೊಲೀಸ್ ಠಾಣೆಯ ಅಡಿಗಲ್ಲು ಸಮಾರಂಭದ ವೇಳೆ ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಅಧ್ಯಕ್ಷ ಸ್ಥಾನ ನೀಡಿ ಕಾರ್ಯಕ್ರಮ ನಡೆಸಲಾಗಿತ್ತು. ಆದರೆ ಇದೀಗ ಉದ್ಘಾಟನಾ ಸಮಾರಂಭದಲ್ಲಿ ಶಿಷ್ಟಾಚಾರ ಪಾಲನೆ ಮಾಡದೇ ಅತಿಥಿ ಸ್ಥಾನ ನೀಡಿರುವುದು ಸರಿಯಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ತಾಲೂಕು ಮಟ್ಟದ ಅಧಿಕಾರಿಗಳು ಈ ಕುರಿತು ಸ್ಪಷ್ಟನೆ ನೀಡಬೇಕು. ಅಲ್ಲದೇ ಆಹ್ವಾನ ಪತ್ರಿಕೆಯಲ್ಲಿ ಆಗಿರುವ ಶಿಷ್ಟಾಚಾರ ಉಲ್ಲಂಘನೆಯನ್ನು ತಕ್ಷಣ ಸರಿಪಡಿಸಿ ಕಾರ್ಯಕ್ರಮ ನಡೆಸಬೇಕು ಎಂದು ಒತ್ತಾಯಿಸಲಾಗಿದೆ. ಇಲ್ಲವಾದಲ್ಲಿ ಶಿಷ್ಟಾಚಾರ ನಿಯಮಗಳ ಬಗ್ಗೆ ಅರಿವು ಇಲ್ಲದೇ ನಡೆದುಕೊಂಡ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಮಾನ್ಯ ಜಿಲ್ಲಾಧಿಕಾರಿ ಗಳಿಗೆ ದೂರು ನೀಡಲಾಗುವುದು ಎಂದು ಹೇಳಿದರು.

ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

# ದೇಶದ ಪ್ರಗತಿಗೆ, ಶಾತಿ, ಸಹಬಾಳ್ವೆಗೆ ಮಾರಕವಾದ ಭಯೋತ್ಪಾದನೆ ಎಂಬುದನ್ನು ತೊಡೆದು ಹಾಕಲು ನಾವೆಲ್ಲರೂ ಬದ್ಧರಾಗೋಣ.





ನೈಜ್ಯ ದೆಸೆ ನ್ಯೂಸ್

**ಸಾವಿರಾರು ವರ್ಷಗಳ ಭವ್ಯ ಸಾಂಸ್ಕೃತಿಕ ಪರಂಪರೆ, ಸಾಮರಸ್ಯವನ್ನು ತನ್ನ ಮಡಿಲಲ್ಲಿ ಹೊತ್ತುಕೊಂಡ ಭಾರತದ ಸುರಕ್ಷತೆ, ಭದ್ರತೆ ಹಾಗೂ ಜನತೆಯಲ್ಲಿ ಹಾಸುಹೊಕ್ಕಾಗಿರುವ ಅಹಿಂಸೆ, ಸಹನೆಯನ್ನು ಸದಾ ಕಾಪಾಡಲು ನಾವೆಲ್ಲರೂ ಸೇರಿ ಭಯೋತ್ಪಾದನೆ ಮತ್ತು ಹಿಂಸೆಯನ್ನು ತೊಡೆದು ಹಾಕೋಣವೆಂದು ಜಿಲ್ಲಾ ಆರೋಗ್ಯ ಮತ್ತು ಕುಟಯಂಬ ಕಲ್ಯಾಣಾಧಿಕಾರಿ ಡಾ ಸುರೇಂದ್ರಬಾಬು ತಿಳಿಸಿದರು.**

ಭಯೋತ್ಪಾದನಾ ವಿರೋಧಿ ದಿನದ ಅಂಗವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದಲ್ಲಿ ಪ್ರತಿಜ್ಞಾವಿಧಿ ಸ್ವೀಕರಿಸಿ ಮಾತನಾಡುತ್ತಾ, ಇತ್ತೀಚಿನ ದಿನಗಳಲ್ಲಿ ಜಾಗತಿಕ ವಿದ್ಯಮಾನಗಳ ಅವಲೋಕನ ಮಾಡಿದಾಗ ಹಲವಾರು ಹೊಸ ಖಾಯಿಲೆಗಳು, ಸೊಂಕು ಕಂಡು ಬಂದಿರುವುದನ್ನು ಮತ್ತು ಅಷ್ಟೇ ಸಮರ್ಥವಾಗಿ ನಮ್ಮ ದೇಶದಲ್ಲಿ ನಿಭಾಯಿಸಿ ರೋಗ ತಡೆಗಟ್ಟುವ ಜೊತೆಗೆ ಜನರ ಪ್ರಾಣ ಹಾನಿ ತಡೆದಿರುವುದು ಎಲ್ಲರ ಕಣ್ಣೆದುರೇ ಇದೆ.

ಅದರಂತೆ ಮಾನವ ನಿರ್ಮಿತ ಭಯೋತ್ಪಾದನೆಯನ್ನು ತಡೆಯಲ್ಲು ನಾವೆಲ್ಲರೂ ಶಾಂತಿ, ಸಾಮಾಜಿಕ ಸೌಹಾರ್ದತೆ ಮತ್ತು ಪರಸ್ಪರ ಅರಿವನ್ನು ಮೂಡಿಸಿ ವಿಚ್ಛಿದ್ರಕಾರಿ ಶಕ್ತಿಗಳ ವಿರುದ್ಧ ಹೋರಾಡಲು ನಾವು ಪಣ ತೊಡೋಣವೆಂದರು. ಈ ಸಂದರ್ಭದಲ್ಲಿ ಡಿಪಿಡಿಓ ಡಾ ಚಂದ್ರಶೇಖರಯ್ಯ ಸ್ವಾಮಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ ಮಹಮ್ಮದ್ ಶಾಕೀರ್, ಸಹಾಯಕ ಆಡಳಿತ ಅಧಿಕಾರಿ ಷಹಜಹಾನ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಡಿವೈಹೆಚ್‌ಇಓ ಬಸಯ್ಯ, ಹಾಗೂ ಲಿಪಿಕ ಸಿಬ್ಬಂದಿ, ಎಲ್ಲ ಕಾರ್ಯಕ್ರಮ ಅನುಷ್ಟಾನ ಅಧಿಕಾರಿಗಳ ಅಧೀನ ಸಿಬ್ಬಂದಿಯವರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬೈಕ್ ರ್‍ಯಾಲಿ ಮೂಲಕ ಜನರಲ್ಲಿ ಹೆಲ್ಮೆಟ್ ಜಾಗೃತಿ ಮೂಡಿಸಿದ ಪೊಲೀಸರು

ನೈಜ್ಯ ದೆಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ: ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ವಾಹನ ಚಾಲನೆ ಮಾಡಿ, ಅವಘಡಾದಿಂದಾಗುವ ದುರ್ಘಟನೆಗೆ ಅಂತ್ಯವಾಡಬೇಕು ಎಂದು ತಹಶೀಲ್ದಾರ್ ಜೂಗಲ್ ಮಂಜುನಾಯಕ ಹೇಳಿದರು.**



ಪಟ್ಟಣದ ಪೊಲೀಸ್ ಠಾಣೆಯಲ್ಲಿ ಗುರುವಾರ ಹಮ್ಮಿಕೊಂಡಿದ್ದ ಹೆಲ್ಮೆಟ್ ಜಾಗೃತಿ ಹಿನ್ನಲೆಯ ಬೈಕ್ ರ್‍ಯಾಲಿ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿ, ದೇಶದಲ್ಲಿ ಪ್ರತಿ ವರ್ಷ ರೋಗ ರುಜಿನಗಳಿಗೆ ಬಲಿಯಾಗುವವರಿಗಿಂತ ರಸ್ತೆ ಅಪಘಾತಗಳಲ್ಲಿ ಸಾಯುವವರ ಸಂಖ್ಯೆ ಹೆಚ್ಚಾಗಿದೆ. ಆದ್ದರಿಂದ ಪ್ರತಿಯೊಬ್ಬರೂ ಹೆಲ್ಮೆಟ್ ಧರಿಸಿ ತಮ್ಮ ಪ್ರಾಣ ಕಾಪಾಡಿಕೊಳ್ಳಲು ಮುಂದಾಗಬೇಕು ಎಂದರು. ಪಿಐ ಕೆ.ಬಿ.ವಾಸುಕುಮಾರ ಮಾತನಾಡಿ, ಹೆಲ್ಮೆಟ್ ಧರಿಸದವರನ್ನು ಹಿಡಿದು ದಂಡ ವಿಧಿಸುವುದು ಪೊಲೀಸರ ಉದ್ದೇಶವಲ್ಲ. ಪ್ರತಿಯೊಬ್ಬರೂ ಹೆಲ್ಮೆಟ್ ಧರಿಸಿ ತಮ್ಮ ಅಮೂಲ್ಯ ಜೀವ ಕಾಪಾಡಲಿ ಎಂಬ ಸದುದ್ದೇಶ ಪೊಲೀಸ್ ಇಲಾಖೆಯದ್ದಾಗಿದೆ.

ಯಾವುದೇ ಜನಹಿತಾಸಕ್ತಿಯ ಯೋಜನೆ ಸಾಕಾರವಾಗಲು ಜನರ ಸಹಭಾಗಿತ್ವ ಅತಿ ಮುಖ್ಯ. ಆದ್ದರಿಂದ ಸಾರ್ವಜನಿಕರು ಸ್ವಯಂ ಪ್ರೇರಣೆಯಿಂದ ಹೆಲ್ಮೆಟ್ ಧರಿಸುವ ಮೂಲಕ ಪೊಲೀಸ್ ಇಲಾಖೆಯ ಕಾರ್ಯಕ್ಕೆ ಕೈಜೋಡಿಸಬೇಕು. ಮನೆಯಲ್ಲಿ ಯಾರೇ ಆದರೂ ಹೆಲ್ಮೆಟ್ ಧರಿಸದೆ ವಾಹನ ಚಲಾಯಿಸುತ್ತಿದ್ದರೆ ಅವರನ್ನು ಎಚ್ಚರಿಸುವುದು ಯುವಕರ ಕರ್ತವ್ಯ. ಮುಖ್ಯವಾಗಿ ಯುವಕರು ಮೊದಲು ಹೆಲ್ಮೆಟ್ ಧರಿಸುವ ಮೂಲಕ ಎಲ್ಲರಿಗೂ ಮಾದರಿಯಾಗಬೇಕು ಎಂದರು.

ಇಲ್ಲಿನ ಪೊಲೀಸ್ ಠಾಣೆಯಿಂದ ಪ್ರಾರಂಭ ಬೈಕ್ ರ್‍ಯಾಲಿ ಜಾಥಾ ಪಟ್ಟಣದ ಪ್ರಮುಖ ರಸ್ತೆಗಲ್ಲಿ ಸಂಚರಿಸಿ, ಕೊಟ್ಟಾಲ್ ರಸ್ತೆ, ಎಪಿಎಂಸಿ, ಮಹಾತ್ಮಗಾಂಧಿ, ಅಂಬೇಡ್ಕರ್ ವೃತ್ತ, ಹೊಸ ಬಸ್ ನಿಲ್ದಾಣ, ನಡುವಲ ಮಸೀದಿ, ಸಂತೆ ಮಾರುಕಟ್ಟೆ, ಸರ್ಕಾರಿ ಆಸ್ಪತ್ರೆ ಮೂಲಕ ಪುನಃ ಪೊಲೀಸ್ ಠಾಣೆಯಲ್ಲಿ ತಲುಪಿತು. ಈ ಸಂದರ್ಭದಲ್ಲಿ ಎಎಸ್‌ಐ ಬಸವರಾಜ ಸೇರಿದಂತೆ ಪೊಲೀಸ್,ಗೃಹ ರಕ್ಷಕದಳದ ಸಿಬ್ಬಂದಿ ಪಾಲ್ಗೊಂಡಿದ್ದರು.

# ಪಡಿತರ ವಿತರಣೆಯಲ್ಲಿ ಸರ್ವರ್ ಸಮಸ್ಯೆ ತಾಂತ್ರಿಕ ವ್ಯವಸ್ಥೆ ಬಲಪಡಿಸಲು ಜಿ.ರಾಜಶೇಖರ ತುರ್ವಿಹಾಳ ಒತ್ತಾಯ

ನೈಜ್ಯ ದೆಸೆ ನ್ಯೂಸ್

**ರಾಜ್ಯದಾದ್ಯಂತ ಪಡಿತರ ವಿತರಣಾ ವ್ಯವಸ್ಥೆಯಲ್ಲಿ ದಿನವು ಸರ್ವರ್ ನಿರಂತರವಾಗಿ ನಿಧಾನಗತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪರಿಣಾಮ, ನ್ಯಾಯಬೆಲೆ ಅಂಗಡಿ ಮಾಲೀಕರು ಹಾಗೂ ಸಾರ್ವಜನಿಕರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದಾರೆ. ಪ್ರತಿದಿನವು ಗಂಟೆಗಳ ಕಾಲ ನ್ಯಾಯಬೆಲೆ ಅಂಗಡಿಗಳ ಮುಂದೆ ಗ್ರಾಹಕರು ಸಾಲಿನಲ್ಲಿ ನಿಂತು ಕಾಯುವ ಸ್ಥಿತಿ ನಿರ್ಮಾಣವಾಗಿದೆ.**



ಇದರಿಂದ ಸಾರ್ವಜನಿಕರಲ್ಲಿ ಅಸಮಾಧಾನ ಮತ್ತು ಆಕ್ರೋಶ ಹೆಚ್ಚುತ್ತಿದೆ. ಇದರ ನೇರ ಹೊರೆ ಅಂಗಡಿ ಮಾಲೀಕರ ಮೇಲೆ ಬೀಳುತ್ತಿದ್ದು, ಅವರು ಅನಗತ್ಯ ಆರೋಪಗಳು, ಒತ್ತಡ ಮತ್ತು ಮಾನಸಿಕ ಹಿಂಸೆ ಎದುರಿಸುವ ಪರಿಸ್ಥಿತಿ ಉಂಟಾಗಿದೆ ಎಂದು ಕರ್ನಾಟಕ ರಾಜ್ಯ ಪಡಿತರ ವಿತರಕರ ಸಂಘದ ತಾಲೂಕು ಘಟಕದ ಅಧ್ಯಕ್ಷರಾದ ಜಿ.ರಾಜಶೇಖರ ತುರ್ವಿಹಾಳ ಹೇಳಿದರು. ಪಡಿತರ ವಿತರಣೆಯಲ್ಲಿ ಸರ್ವರ್ ಸಮಸ್ಯೆ ತಾಂತ್ರಿಕ ವ್ಯವಸ್ಥೆಯನ್ನು ಬಲಪಡಿಸಲು ಎದುರಾಗುತ್ತಿರುವ ಗಂಭೀರ ತಾಂತ್ರಿಕ ಸಮಸ್ಯೆಗಳ ಕುರಿತು ಸಾರ್ವಜನಿಕರ ಹಾಗೂ ಪಡಿತರ ಅಂಗಡಿ ಮಾಲೀಕರ ಪರವಾಗಿ ಸರ್ಕಾರ ಮತ್ತು ಸಂಬಂಧಿಸಿದ ಅಧಿಕಾರಿಗಳ ಗಮನ ಸೆಳೆಯಲು ಬಯಸಿ, ಇದಕ್ಕೂ ಹೆಚ್ಚುವರಿಯಾಗಿ,

ಮೇ ಹಾಗೂ ಜೂನ್ ತಿಂಗಳ ವಿತರಣೆಯಲ್ಲಿ ಒಂದೇ ಬಾರಿ ಎರಡು ಸಾರಿ ಬಯೋಮೆಟ್ರಿಕ್ ಪಡೆಯುವ ವ್ಯವಸ್ಥೆ ಜಾರಿಗೊಂಡಿರುವುದರಿಂದ ವಿತರಣಾ ಪ್ರಕ್ರಿಯೆಯನ್ನು ಇನ್ನಷ್ಟೂ ಸಂಕೀರ್ಣ ಹಾಗೂ ವಿಳಂಬವಾಗುತ್ತಿದೆ. ಬೆರಳಚ್ಚು ಸರಿಯಾಗಿ ಸ್ಕ್ಯಾನ್ ಆಗದಿರುವುದು, ಆಧಾರ್ ದೃಢೀಕರಣ ವಿಫಲವಾಗುವುದು, ಸರ್ವರ್ ಪ್ರತಿಕ್ರಿಯೆ ನೀಡದಿರುವುದು ಸೇರಿದಂತೆ ಅನೇಕ ತಾಂತ್ರಿಕ ಸಮಸ್ಯೆಗಳು ಪ್ರತಿದಿನದ ತೊಂದರೆಯಾಗಿ ಪರಿಣಮಿಸಿವೆ. ಇದರಿಂದ ವೃದ್ಧರು, ಮಹಿಳೆಯರು ಹಾಗೂ ಗ್ರಾಮೀಣ ಭಾಗದ ಸಾರ್ವಜನಿಕರು ಹೆಚ್ಚು ಸಂಕಷ್ಟ ಅನುಭವಿಸುತ್ತಿದ್ದಾರೆ. ಸರ್ಕಾರ ಹಾಗೂ ಸಂಬಂಧಿಸಿದ ಇಲಾಖೆ ತಕ್ಷಣವೇ ಈ ಗಂಭೀರ ಸಮಸ್ಯೆಗಳನ್ನು ಪರಿಗಣಿಸಿ, ಸರ್ವರ್ ಸಾಮರ್ಥ್ಯವನ್ನು ತುರ್ತಾಗಿ ಸುಧಾರಿಸಬೇಕು.



ಬಯೋಮೆಟ್ರಿಕ್ ಪ್ರಕ್ರಿಯೆಯನ್ನು ಸರಳೀಕರಿಸಬೇಕು, ಡಬಲ್ ಬಯೋಮೆಟ್ರಿಕ್ ವ್ಯವಸ್ಥೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು. ಪ್ರತಿ ಅರ್ಧಗಂಟೆಗೊಮ್ಮೆ ಲಾಗೌಟ್ ಆಗುವುದನ್ನು ತಪ್ಪಿಸಬೇಕು. ಪಡಿತರ ವಿತರಣೆಯಲ್ಲಿ ಅಡಚಣೆಯಾಗದಂತೆ ತಾಂತ್ರಿಕ ವ್ಯವಸ್ಥೆಯನ್ನು ಬಲಪಡಿಸಬೇಕು ಎಂದು ಒತ್ತಾಯಿಸಿ, ಇಲ್ಲವಾದಲ್ಲಿ ಅಂಗಡಿ ಮಾಲೀಕರ ಮಾನಸಿಕ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಇದ್ದು, ಸಾರ್ವಜನಿಕ ಅಸಮಾಧಾನ ಮತ್ತಷ್ಟು ಹೆಚ್ಚುವ ಆತಂಕವಿದೆ. ಜೊತೆಗೆ ಪಡಿತರ ವಿತರಣೆಯಲ್ಲಿ ನಿರೀಕ್ಷಿತ ಪ್ರಗತಿ ಕಾಣದಿರುವುದರಿಂದ ಸರ್ಕಾರದ ಮೇಲಿನ ಸಾರ್ವಜನಿಕ ವಿಶ್ವಾಸಕ್ಕೂ ಧಕ್ಕೆಯಾಗುವ ಸಾಧ್ಯತೆ ಇದೆ. ಆದ್ದರಿಂದ ಸರ್ಕಾರ ಮತ್ತು ಸಂಬಂಧಿತ ಅಧಿಕಾರಿಗಳು ತುರ್ತು ಕ್ರಮ ಕೈಗೊಂಡು ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಒದಗಿಸಬೇಕೆಂದು ಸಿಂಧನೂರು ತಾಲೂಕು ಪಡಿತರ ವಿತರಕರ ಸಂಘದಿಂದ ಮನವಿ ಮಾಡಿಕೊಳ್ಳುತ್ತೇವೆ ಎಂದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಮೆಕ್ಯಾನಿಕ್ ಮೆಡಿಕಲ್ ಎಲೆಕ್ಟ್ರಾನಿಕ್ಸ್

ಐಟಿಐ (ITI) ಮೆಕ್ಯಾನಿಕ್ ಮೆಡಿಕಲ್ ಎಲೆಕ್ಟ್ರಾನಿಕ್ಸ್ (Mechanic Medical Electronics) ಎನ್ನುವುದು 2 ವರ್ಷಗಳ ಎಂಜಿನಿಯರಿಂಗ್ ಕೋರ್ಸ್ ಆಗಿದೆ. ಇದು ಆಸ್ಪತ್ರೆಗಳಲ್ಲಿ ಬಳಸುವ ವೈದ್ಯಕೀಯ ಉಪಕರಣಗಳ ಸ್ಥಾಪನೆ, ದುರಸ್ತಿ ಮತ್ತು ನಿರ್ವಹಣೆಯ ಬಗ್ಗೆ ಪ್ರಾಯೋಗಿಕ ತರಬೇತಿ ನೀಡುತ್ತದೆ.ಈ ಕೋರ್ಸ್‌ನ ಸಂಪೂರ್ಣ ವಿವರಗಳು ಇಲ್ಲಿವೆ:ಅರ್ಹತೆ (Eligibility):ಕನಿಷ್ಠ 10ನೇ ತರಗತಿ (SSLC) ಪಾಸಾಗಿರಬೇಕು. ಗಣಿತ ಮತ್ತು ವಿಜ್ಞಾನ ವಿಷಯಗಳನ್ನು ಓದಿರುವವರಿಗೆ ಹೆಚ್ಚು ಅನುಕೂಲವಾಗುತ್ತದೆ. ಕಾಲಾವಧಿ (Duration):2 ವರ್ಷಗಳು (4 ಸೆಮಿಸ್ಟರ್‌ಗಳು). ಕೋರ್ಸ್‌ನಲ್ಲಿ ಏನು ಕಲಿಯುತ್ತೀರಿ?ವೈದ್ಯಕೀಯ ಎಲೆಕ್ಟ್ರಾನಿಕ್ಸ್ ಉಪಕರಣಗಳ ಮೂಲಭೂತ ಅಂಶಗಳು.ಎಕ್ಸ್‌ರೇ (X-ray), ಇಸಿಜಿ (ECG), ಅಲ್ಟ್ರಾಸೌಂಡ್ (Ultrasound) ಮತ್ತು ರಕ್ತದೊತ್ತಡ ಮಾಪಕಗಳಂತಹ ವೈದ್ಯಕೀಯ ಯಂತ್ರಗಳ ದುರಸ್ತಿ ಮತ್ತು ನಿರ್ವಹಣೆ.ಎಲೆಕ್ಟ್ರಾನಿಕ್ ಸರ್ಕ್ಯೂಟ್‌ಗಳು ಮತ್ತು ವೈರಿಂಗ್ ಬಗ್ಗೆ ಮಾಹಿತಿ.ಉಪಕರಣಗಳನ್ನು ಸುರಕ್ಷಿತವಾಗಿ ನಿರ್ವಹಿಸುವುದು.ಉದ್ಯೋಗಾವಕಾಶಗಳು (Job Opportunities):ಕೋರ್ಸ್ ಮುಗಿದ ನಂತರ ನೀವು ಈ ಕೆಳಗಿನ ಕೆಲಸಗಳನ್ನು ಪಡೆಯಬಹುದು:ಆಸ್ಪತ್ರೆಗಳಲ್ಲಿ ಬಯೋಮೆಡಿಕಲ್ ಟೆಕ್ನಿಷಿಯನ್ (Biomedical Technician).ವೈದ್ಯಕೀಯ ಉಪಕರಣಗಳನ್ನು ತಯಾರಿಸುವ ಕಂಪನಿಗಳಲ್ಲಿ ಟೆಕ್ನಿಷಿಯನ್ ಅಥವಾ ಸೇವಾ ಎಂಜಿನಿಯರ್ (Service Engineer).ಎಲೆಕ್ಟ್ರಾನಿಕ್ ಉಪಕರಣಗಳ ಮಾರಾಟ ಮತ್ತು ಸೇವಾ ಕೇಂದ್ರಗಳಲ್ಲಿ ಕೆಲಸ.ಸ್ವಂತ ದುರಸ್ತಿ ಕೇಂದ್ರವನ್ನು (Repair Shop) ಪ್ರಾರಂಭಿಸಬಹುದು.

## ಇಂಜೆಕ್ಷನ್ ರೂಪದಲ್ಲಿ ಸೌಂದರ್ಯ ವರ್ಧಕಗಳ ಬಳಕೆ ಕಾನೂನು ಬಾಹಿರ

ನೈಜ್ಯ ದೆಸೆ ನ್ಯೂಸ್

**ನವದೆಹಲಿ: ಸೌಂದರ್ಯ ವರ್ಧಕಗಳನ್ನು ಇಂಜೆಕ್ಷನ್ ರೂಪದಲ್ಲಿ ಬಳಸುವುದು ಅಥವಾ ಬಳಸಲು ಅವಕಾಶ ನೀಡುವುದು ಕಾನೂನುಬಾಹಿರ ಎಂದು ಕೇಂದ್ರ ಔಷಧ ಮಾನದಂಡ ನಿಯಂತ್ರಣ ಸಂಸ್ಥೆ (ಸಿಡಿಎಸ್‌ಸಿಒ) ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದೆ. ಕೇಂದ್ರ ಆರೋಗ್ಯ ಸೇವೆಗಳ ಮಹಾನಿರ್ದೇಶನಾಲಯದ ಅಧೀನದಲ್ಲಿರುವ ಸಿಡಿಎಸ್‌ಸಿಒ ಈ ಕುರಿತು ಸಾರ್ವಜನಿಕ ಎಚ್ಚರಿಕೆಯನ್ನು ಪ್ರಕಟಿಸಿದೆ. ಡ್ರಗ್?ಸ ಅಂಡ್ ಕಾಸೆಟಿಕ್ಸ್ ಕಾಯ್ದೆ–1940 ಹಾಗೂ ಕಾಸೆಟಿಕ್?ಸ ನಿಯಮಗಳು–2020 ಅನ್ವಯ ಸೌಂದರ್ಯ ವಸ್ತುಗಳ ತಯಾರಿಕೆ, ಮಾರಾಟ ಮತ್ತು ಬಳಕೆಗೆ ಕಟ್ಟುನಿಟ್ಟಿನ ನಿಯಮಗಳಿವೆ ಎಂದು ತಿಳಿಸಿದೆ.**



ಎಚ್ಚರಿಕೆಯ ಪ್ರಕಾರ, ಸೌಂದರ್ಯ ವರ್ಧಕಗಳು ಮಾನವ ದೇಹವನ್ನು ಸ್ವಚ್ಛಗೊಳಿಸಲು, ಸೌಂದರ್ಯ ಹೆಚ್ಚಿಸಲು, ಆಕರ್ಷಕತೆ ವೃದ್ಧಿಸಲು ಅಥವಾ ದೇಹದ ರೂಪದಲ್ಲಿ ಬದಲಾವಣೆ ತರಲು ಮಾತ್ರ ಬಳಕೆಯಾಗಬೇಕು. ಇವುಗಳನ್ನು ದೇಹಕ್ಕೆ ಇಂಜೆಕ್ಷನ್ ರೂಪದಲ್ಲಿ ಬಳಸಲು ಯಾವುದೇ ಅನುಮತಿ ಇಲ್ಲ ಎಂದು ಸ್ಪಷ್ಟಪಡಿಸಲಾಗಿದೆ. ಇದೇ ವೇಳೆ, ವೈದ್ಯಕೀಯ ಚಿಕಿತ್ಸೆಗಾಗಿ ಅಥವಾ ವೃತ್ತಿಪರರು ಬಳಸುವ ಚಿಕಿತ್ಸಾ ವಿಧಾನಗಳಲ್ಲಿ ಕಾಸೆಟಿಕ್ಸ್ ಬಳಸುವಂತಿಲ್ಲ. ಕಾಸೆಟಿಕ್ಸ್ ಅನ್ನು ದೇಹದ ಮೇಲೆ ಹಚ್ಚುವುದು, ಎರಚುವುದು, ಪುಡಿ ರೂಪದಲ್ಲಿ ಬಳಕೆ ಮಾಡುವುದು ಅಥವಾ ಸ್ಪ್ರೇ ಮಾಡುವ ಮಟ್ಟಕ್ಕೆ ಮಾತ್ರ ಸೀಮಿತವಾಗಿರಬೇಕು ಎಂದು ಸೂಚಿಸಲಾಗಿದೆ. ಸೌಂದರ್ಯ ಉತ್ಪನ್ನಗಳ ಲೇಬಲ್‌ಗಳಲ್ಲಿ ತಪ್ಪು ಮಾಹಿತಿ ನೀಡುವುದು, ಅತಿರಂಜಿತ ಅಥವಾ ದಾರಿ ತಪ್ಪಿಸುವ ಜಾಹೀರಾತು ಮಾಡುವುದು ಕೂಡ ಕಾನೂನು ಉಲ್ಲಂಘನೆಯಾಗುತ್ತದೆ ಎಂದು ಸಿಡಿಎಸ್‌ಸಿಒ ಎಚ್ಚರಿಸಿದೆ. ನಿಷೇಧಿತ ಪದಾರ್ಥಗಳ ಬಳಕೆ, ತಪ್ಪು ಪ್ರಚಾರ, ಇಂಜೆಕ್ಷನ್ ಮೂಲಕ ಸೌಂದರ್ಯ ಚಿಕಿತ್ಸೆ ನೀಡುವುದು ಸೇರಿದಂತೆ ಯಾವುದೇ ಉಲ್ಲಂಘನೆ ಕಂಡುಬಂದರೆ ಸಾರ್ವಜನಿಕರು ಸಿಡಿಎಸ್‌ಸಿಒ ಹಾಗೂ ರಾಜ್ಯ ಪರವಾನಗಿ ಪ್ರಾಧಿಕಾರಗಳಿಗೆ ದೂರು ನೀಡಬಹುದು ಎಂದು ಸಂಸ್ಥೆ ಮನವಿ ಮಾಡಿದೆ.

## ರಾಯಚೂರು ವಿಮಾನ ನಿಲ್ದಾಣ ಕಾಮಗಾರಿ ಸ್ಥಳಕ್ಕೆ ಜಿಲ್ಲಾಧಿಕಾರಿ ಪೂವಿತಾ ಎಸ್. ಭೇಟಿ: ಪರಿಶೀಲನೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಮೇ.20ರ ಸಂಜೆ 4ಗಂಟೆಗೆ ರಾಯಚೂರು ನಗರದ ಹೊರ ವಲಯದ ಯರಮರಸ್ ಬಳಿಯಲ್ಲಿ ನಿರ್ಮಾಣ ಹಂತದಲ್ಲಿರುವ ವಿಮಾನ ನಿಲ್ದಾಣದ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿ ಪ್ರಗತಿಯ ಬಗ್ಗೆ ಸಮಗ್ರ ಪರಿಶೀಲನೆ ನಡೆಸಿದರು.**

ಜಿಲ್ಲಾಧಿಕಾರಿಗಳು, ಮೊದಲಿಗೆ ವಿಮಾನ ನಿಲ್ದಾಣದ ರನ್ ವೇ ಕಾಮಗಾ–ರಿಯ ವೀಕ್ಷಣೆ ನಡೆಸಿ ಕಾಮಗಾರಿಯ ಪ್ರಗತಿಯ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು. ಒಟ್ಟು 1.7 ಕಿ ಮೀ ಉದ್ದದ ರನ್ ವೇ ಪೈಕಿ ಇದುವರೆಗೆ 850 ಮೀಟರ್‌ನಷ್ಟು ರನ್ ವೇಗೆ ಮರಂ ಹಾಕಿದ್ದು, ಬಾಕಿ ಕಾಮಗಾರಿ ಪ್ರಗತಿ ಹಂತದಲ್ಲಿದೆ ಎಂದು ಅಧಿಕಾರಿಗಳು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು. ಬಳಿಕ ಜಿಲ್ಲಾಧಿಕಾರಿಗಳು ಪ್ಯಾಸೆಂಜರ್ ಟರ್ಮಿನಲ್ ಬಿಲ್ಡಿಂಗ್‌ಗೆ ಭೇಟಿ ನೀಡಿ ಪರಿಶೀಲಿಸಿದರು.

ಈ ಕಟ್ಟಡಕ್ಕೆ ಈಗಾಗಲೇ ಕಾಲಂ ಮತ್ತು ಚೆತ್ ಹಾಕಿದ್ದು, ಈಗ ರೂಫ್ ಟ್ರಸ್ ಕಾಮಗಾರಿ ಕೈಗೊಳ್ಳಲಾಗುತ್ತಿದೆ



ಎಂದು ಅಧಿಕಾರಿಗಳು ತಿಳಿಸಿದರು. ಇದೆ ವೇಳೆ ಎಲೆಕ್ಟ್ರಿಕಲ್ ಸಬ್ ಸ್ಟೇಷನ್ ಬಿಲ್ಡಿಂಗ್–1 ಮತ್ತು ಬಿಲ್ಡಿಂಗ್ 2ರ ಕಾಮಗಾರಿಗಳ ಬಗ್ಗೆ ಸಹ ಜಿಲ್ಲಾಧಿಕಾರಿಗಳು ಪರಿಶೀಲಿಸಿದರು. ಒಟ್ಟು 12 ಸೆಕ್ಯುರಿಟಿ ವಾಚ್ ಟವರ್ ಪೈಕಿ ಇದೀಗ 8 ಟವರ್‌ಗಳ ನಿರ್ಮಾಣ ಕಾರ್ಯವು ಪ್ರಗತಿಯಲ್ಲಿದೆ. ವಿಮಾನ ನಿಲ್ದಾಣದ ಕಾಂಪೌಂಡ್ ಒಳಭಾಗದಲ್ಲಿನ ಆಂತರಿಕ ರಸ್ತೆಗಳ ನಿರ್ಮಾಣ ಕಾಮಗಾರಿಯು ಸಹ ಪ್ರಗತಿಯಲ್ಲಿದೆ. ವಿಮಾನ ನಿಲ್ದಾಣದ ಒಟ್ಟು 8 ಕಿ.ಮೀಟರ್ ಕಾಂಪೌಂಡ್ ನಿರ್ಮಾಣ ಕಾರ್ಯವು ಈಗಾಗಲೇ ಪೂರ್ಣಗೊಂಡಿದೆ ಎಂದು ಅಧಿಕಾರಿಗಳು ಮತ್ತು ಗುತ್ತಿಗೆದಾರರು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು.

ವೇಗ ನೀಡಲು ಸೂಚನೆ: ವಿಮಾನ ನಿಲ್ದಾಣ ಕಾಮಗಾರಿಯನ್ನು ವೇಗಗೊಳಿಸಿ, ಬಾಕಿ ಉಳಿಸಿದ ಎಲ್ಲ ಕಾರ್ಯಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳು, ಸಂಬಂಧಿಸಿದ ಗುತ್ತಿಗೆದಾರರು ಮತ್ತು ಅಧಿಕಾ–ರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು. ಲೇಔಟ್ ಕಾಮಗಾರಿಗಳ ವೀಕ್ಷಣೆ: ರಾಯಚೂರು ಹೊರ ವಲಯದ ದಂಡ್ ಗ್ರಾಮದ 108 ಹಾಗೂ ಏಗನೂರು ಗ್ರಾಮದ 30 ಮನೆಗಳ ಹಸ್ತಾಂತರ ಹಿನ್ನಲೆಯಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಲೇಔಟ್‌ಗಳಿಗೆ ಬುಧವಾರ ಜಿಲ್ಲಾಧಿಕಾ–ರಿಗಳು ಭೇಟಿ ನೀಡಿ ಪರಿಶೀಲನೆ ಮಾಡಿದರು.

ಲೇಔಟ್‌ಗಳಲ್ಲಿ ಇರಬೇಕಾದ ಎಲ್ಲ ಮೂಲಭೂತ ಸೌಕರ್ಯಗಳನ್ನು ಅಚ್ಚುಕಟ್ಟಾಗಿ ಇರಬೇಕು. ಲೇಔಟ್ ಕಾಮಗಾರಿಯು ನಿಗದಿತ ಸಮಯದಲ್ಲಿ ಗುಣಮಟ್ಟದಿಂದ ಪೂರ್ಣಗೊಳಿಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ನಿರ್ದೇಶನ ನೀಡಿದರು. ಇದೇ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ವೆಂಕಟೇಶ ಗಲಗ, ಸಹಾಯಕ ಅಭಿಯಂತರರಾದ ಮಹೇಶ್, ಗುತ್ತಿಗೆದಾರ ಕಂಪನಿ ಕೆಎಂವಿದ ಪ್ರತಿನಿಧಿಗಳಾದ ಪ್ರವೀಣ್ ಹಾಗೂ ಇನ್ನಿತರರು ಇದ್ದರು.

## ರಾಷ್ಟ್ರ ಮಟ್ಟದ ಕಾಯಕ ರತ್ನ ಪ್ರಶಸ್ತಿಗೆ ಭಾಜನ ಬಸವರಾಜ ಕಡಬೂರು

ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಕಂದಬ ಫೌಂಡೇಶನ್ ಗೋವಾ ಪಣಜಿ, ಬುದ್ಧ ಬಸವ ಅಂಬೇಡ್ಕರ್ ಜಯಂತಿ ಹಾಗೂ ಸುವರ್ಣ ಪೋಕಸ್ ಪತ್ರಿಕೆಯ ವಾರ್ಷಿಕೋತ್ಸವದ ಅಂಗವಾಗಿ ಗೋವಾ ನಗರದ ಹೋಟೆಲ್ ಅಶೋಕ ಪ್ಲಾಜಾದಲ್ಲಿ ಮೇ 24 ರಂದು ನಡೆಯುವ ಜಯಂತಿ ಕಾರ್ಯಕ್ರಮದಲ್ಲಿ ವೈದ್ಯಕೀಯ ಹಾಗೂ ಸಮಾಜ ಸೇವೆ ಕ್ಷೇತ್ರದಲ್ಲಿ ಅನುಪಮ ಸೇವೆ ಸಲ್ಲಿಸಿದ ಕಾರಣಕ್ಕಾಗಿ ಕಾಯಕ ರತ್ನ ರಾಷ್ಟ್ರ ಮಟ್ಟದ ಪ್ರಶಸ್ತಿಯನ್ನು ನೀಡಲಾಗುತ್ತದೆ ಎಂದು ಕಂದಬ ಫೌಂಡೇಶನ್ ಅಧ್ಯಕ್ಷ ಬಾಳೇಶ್ ಉಪ್ಪಾರ ಹಟ್ಟಿ ರವರು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಿದರು.**



ಬಸವರಾಜ ಎಸ್ ಬಿ ಎಮ್ ಕೆ ಅವರು ತಾಲೂಕಿನ ಚಿಕ್ಕಕಡಬೂರು ಗ್ರಾಮದ ನಿವಾಸಿಯಾಗಿದ್ದು, ಇವರು ಎಂ.ಎ ರಾಜ್ಯಶಾಸ್ತ್ರ ವಿಭಾಗದ ವಿಷಯದಲ್ಲಿ ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿದ್ದಾರೆ.

ಗ್ರಾಮೀಣ ಪ್ರದೇಶದಲ್ಲಿ ಶ್ರೀ ಭೀರಲಿಂಗೇಶ್ವರ ಮೇಡಿಕಲ್ ಮತ್ತು ಜನರಲ್ ಸ್ಟೋರ್ಸ್ ಎಂಬ ಮೇಡಿಕಲ್ ಶಾಪ್ ಆರಂಭ ಮಾಡಿಕೊಂಡು ಸಾರ್ವಜನಿಕ ಸೇವೆಯ ಜೊತೆಗೆ ಅನಾಥ ದನಕರುಗಳಿಗೆ ಉಚಿತವಾಗಿ ಔಷಧಿ ಉಪಚಾರಗಳನ್ನು ನೀಡುವ ಮೂಲಕ ಅಳಿಲು ಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ.

ಆರು ವರ್ಷಗಳ ಹಿಂದೆ ತಾಲ್ಲೂಕಿನ ಉದ್ಬಾಳಯು ಗ್ರಾಮ ಪಂಚಾಯಿತಿಗೆ ಚಿಕ್ಕಕಡಬೂರು ಗ್ರಾಮದಿಂದ ಅವಿರೋಧವಾಗಿ ಆಯ್ಕೆಯಾಗಿ ಗ್ರಾಮ ಪಂಚಾಯಿತಿ ಸದಸ್ಯರ ಅನುದಾನದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳು ಪ್ರಾರಂಭವಾಗಲು ರಾಜಕೀಯ ಮುಖಂಡರಿಂದ ಚಾಲನೆ ನೀಡಿಸಲು ಅವಿರತವಾಗಿ ಶ್ರಮಿಸಿ ಗ್ರಾಮದಲ್ಲಿ ಧಾರ್ಮಿಕ ಕಾರ್ಯಕ್ರಮಗಳು ಅಚ್ಚುಕಟ್ಟಾಗಿ ನೇರವೇರಲು ಸಹಕಾರ ನೀಡುವ ಮೂಲಕ ಗ್ರಾಮಸ್ಥರ ಗಮನ ಸೆಳೆದು ಮೂಲಭೂತ ಸೌಕರ್ಯಗಳ ಅಭಿವೃದ್ಧಿ,ಸ್ವಚ್ಛತಾ ಕಾರ್ಯಕ್ರಮಗಳು,ಸಾರ್ವಜನಿಕ ಸಮಸ್ಯೆಗಳ ಪರಿಹಾರದಲ್ಲಿ ವಿಶೇಷ ಕಾಳಜಿ ವಹಿಸಿದ್ದರು. ಅವರು ಉತ್ತಮ ಪ್ರಶಸ್ತಿ ಪುರಸ್ಕಾರಕ್ಕೆ ಆಯ್ಕೆಯಾಗಿರುವುದರಿಂದ ಚಿಕ್ಕಕಡಬೂರು ಗ್ರಾಮದ ಜನರು ಮಾತ್ರವಲ್ಲದೆ ಜಿಲ್ಲೆಯ ಸಾರ್ವಜನಿಕರು,ಸ್ನೇಹಿತರು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಅಭಿನಂದನೆ ಸಲ್ಲಿಸಿದ್ದಾರೆ.

## ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ರಾಜ್ಯಾಧ್ಯಕ್ಷ ಚಂದ್ರಶೇಖರ ನುಗ್ಗಿ ಅವರಿಗೆ ಸನ್ಮಾನ




ನೈಜ್ಯ ದೆಸೆ ನ್ಯೂಸ್

**ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ರಾಜ್ಯಾಧ್ಯಕ್ಷರಾಗಿ ಎರಡನೇ ಬಾರಿಗೆ ಆಯ್ಕೆಯಾಗಿರುವ ಸಂಘಟನಾ ಚತುರ, ಶಿಕ್ಷಕರ ಧ್ವನಿಯಾಗಿ ನಿರಂತರ ಹೋರಾಟ ನಡೆಸುತ್ತಿರುವ ಹಾಗೂ ಸದಾ ಶಿಕ್ಷಕರ ಸೇವೆಯಲ್ಲಿ ತೊಡಗಿಸಿಕೊಂಡಿರುವ ಶಿಕ್ಷಕರ ಕಣ್ಮಣಿ ಶ್ರೀ ಚಂದ್ರಶೇಖರ ನುಗ್ಗಿ ಅವ–ರಿಗೆ ಬೆಂಗಳೂರಿನ ಅವರ ಕಚೇರಿಯಲ್ಲಿ ಗೌರವಪೂರ್ವಕವಾಗಿ ಸನ್ಮಾನಿಸಲಾಯಿತು.**

ಈ ಸಂದರ್ಭದಲ್ಲಿ ಕುಷ್ಟಗಿ ತಾಲ್ಲೂಕಿನ ಬಂಡರಗಲ್ಲ ಗ್ರಾಮದ ಶಿಕ್ಷಕರಾದ ಶ್ರೀ ಗಿರೀಶ ಶೀಲವಂತರ ಅವರು, ಅವರ ಧರ್ಮಪತ್ನಿ ಶ್ರೀಮತಿ ಸಾವಿತ್ರಿ ಶೀಲವಂತರ ಹಾಗೂ ಮಗಳು ಶ್ರೀದೇವಿ ಶೀಲವಂತರ (ಶಿರಸ್ತೆದಾರರು, ಸಿಟಿ ಸಿವಿಲ್ ಕೋರ್ಟ್ ಬೆಂಗಳೂರು) ಅವರು ಶ್ರೀ ಚಂದ್ರಶೇಖರ ನುಗ್ಗಿ ಅವರನ್ನು ಶಾಲು ಹೊದಿಸಿ, ಪುಷ್ಪಗುಚ್ಛ ನೀಡಿ ಅಭಿನಂದಿಸಿದರು. ಶಿಕ್ಷಕರ ಹಿತಾಸಕ್ತಿಗಾಗಿ ರಾಜ್ಯಾದ್ಯಂತ ಸಂಘಟನೆಯನ್ನು ಬಲಪಡಿಸಿ, ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕಾಗಿ ಹೋರಾಟ ನಡೆಸುತ್ತಿರುವ ಶ್ರೀ ಚಂದ್ರಶೇಖರ ನುಗ್ಗಿ ಅವರ ಸೇವೆಯನ್ನು ಈ ಸಂದರ್ಭದಲ್ಲಿ ಪ್ರಶಂಸಿಸಲಾಯಿತು.

ಶಿಕ್ಷಕರ ಪರ ಕಾಳಜಿ, ಸರಳ ವ್ಯಕ್ತಿತ್ವ ಹಾಗೂ ಸಂಘಟನಾ ಸಾಮರ್ಥ್ಯದಿಂದ ಅವರು ಶಿಕ್ಷಕರ ಮನಸ್ಸಿನಲ್ಲಿ ವಿಶೇಷ ಸ್ಥಾನ ಪಡೆದಿದ್ದಾರೆ ಎಂದು ಅಭಿಪ್ರಾಯ ವ್ಯಕ್ತವಾಯಿತು. ರಾಜ್ಯದ ಶಿಕ್ಷಕರಿಗೆ ನ್ಯಾಯ ಒದಗಿಸಲು, ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಹಾಗೂ ಸಂಘಟನೆಯ ಶಕ್ತಿವರ್ಧನೆಗೆ ಅವರ ನಾಯಕತ್ವ ಇನ್ನಷ್ಟು ಪರಿಣಾಮಕಾರಿಯಾಗಿ ಮುಂದುವ–ರಿಯಲಿ ಎಂದು ಶುಭ ಹಾರೈಸಲಾಯಿತು. ಸನ್ಮಾನ ಕಾರ್ಯಕ್ರಮದಲ್ಲಿ ಆತ್ಮೀಯತೆ ಮತ್ತು ಗೌರವದ ವಾತಾವರಣ ಮೂಡಿದ್ದು, ಉಪಸ್ಥಿತರಿದ್ದವರು ಶ್ರೀ ಚಂದ್ರಶೇಖರ ನುಗ್ಗಿ ಅವರ ಕಾರ್ಯಶೈಲಿ ಹಾಗೂ ಶಿಕ್ಷಕರ ಮೇಲಿನ ಬದ್ಧತೆಯನ್ನು ಕೊಂಡಾಡಿದರು.

## ರಾಷ್ಟ್ರೀಯ ಭಯೋತ್ಪಾದನಾ ವಿರೋಧಿ ದಿನ ಆಚರಣೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ರಾಷ್ಟ್ರೀಯ ಭಯೋತ್ಪಾದನಾ ವಿರೋಧಿ ದಿನದ ಅಂಗವಾಗಿ ಮೇ.21ರ ಗುರುವಾರ ದಂದು ರಾಯಚೂರು ನಗರದ ಜಿಲ್ಲಾ ಪಂಚಾಯತಿ ಕಚೇರಿಯ ಆವರಣದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕುಮಾರ್ ಕಾಂದೂ ಅವರ ನೇತೃತ್ವದಲ್ಲಿ ಪ್ರತಿಜ್ಞಾ ವಿಧಿಯನ್ನು ಭೋದಿಸುವ ಮೂಲಕ ಆಚರಣೆ ಮಾಡಲಾಯಿತು.**




ಪ್ರತಿ ವರ್ಷ ಮೇ 21ನೇ ದಿನಾಂಕದಂದು ಭಯೋತ್ಪಾದನಾ ವಿರೋಧಿ ದಿನವನ್ನಾಗಿ ಆಚರಿಸಲಾಗುತ್ತಿದೆ. ಅದರಂತೆ ಈ ವರ್ಷವೂ ಭಯೋತ್ಪಾದನಾ ವಿರೋಧಿ ದಿನವನ್ನು ಆಚರಿಸಲು ಉದ್ದೇಶಿಸಲಾಗಿದೆ ಎಂದರು. ಭಯೋತ್ಪಾದನೆ ಮಟ್ಟಹಾಕಲು ಎಲ್ಲರ ಸಹಕಾರ ಅಗತ್ಯ. ಸ್ವಾರ್ಥ ಬಿಟ್ಟು ರಾಜ್ಯ ಹಾಗೂ ದೇಶದ ಹಿತ ದೃಷ್ಟಿಯಿಂದ ಭಯೋತ್ಪಾದನೆ ವಿರುದ್ಧ ಎಚ್ಚೆತ್ತುಕೊಳ್ಳಬೇಕಿದೆ ಎಂದರು. ಭಯೋತ್ಪಾದನಾ ಕೃತ್ಯಗಳ ವಿರುದ್ಧ ಜಾಗೃತರಾಗದಿದ್ದಲ್ಲಿ ಸಮಾಜಘಾತಕ ಶಕ್ತಿಗಳು ಹಾಗೂ ಭಯೋತ್ಪಾದಕರು ಅಮಾನುಷ ಕೃತ್ಯಗಳನ್ನು ಮುಂದುವರೆಸುವರು.

ಇದರಿಂದ ಅಮಾಯಕರು ಜೀವ ಕಳೆದುಕೊಳ್ಳುವ ಜೊತೆಗೆ ದೇಶದ ಅಭಿವೃದ್ಧಿ ಕುಂಟಿತಗೊಳ್ಳುವುದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕುಮಾರ್ ಕಾಂದೂ ಅವರು ಹೇಳಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ, ಯೋಜನಾ ನಿರ್ದೇಶಕ ಶರಣಬಸವರಾಜ ಕೆ, ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಮುಖ್ಯ ಲೆಕ್ಕಾಧಿಕಾರಿ ವಿಜಯ ಶಂಕರ ಸೇರಿದಂತೆ ಕಚೇರಿಯ ಸಿಬ್ಬಂದಿಗಳು ಇದ್ದರು.

## ಒಂದು ವರ್ಷದ ರಂಗಶಿಕ್ಷಣ ತರಬೇತಿಗೆ ಅರ್ಜಿ ಆಹ್ವಾನ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಮೈಸೂರಿನ ರಂಗಶಿಕ್ಷಣ ಸಂಸ್ಥೆಯ ವತಿಯಿಂದ ಪ್ರಸ್ತುತ 2026–27ನೇ ಸಾಲಿನಲ್ಲಿ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಸಂಸ್ಥೆಯು ಕರ್ನಾಟಕ ಸರ್ಕಾರದಿಂದ ಮೈಸೂ–ರಿನಲ್ಲಿ ಸ್ಥಾಪಿತವಾಗಿರುವ ರಂಗಾಯಣ ರೆಪರ್ಟ–ರಿಯು ಕಳೆದ 16 ವರ್ಷಗಳ ಹಿಂದೆ ಸ್ಥಾಪಿಸಿದ ಭಾರತೀಯ ರಂಗಶಿಕ್ಷಣ ಕೇಂದ್ರ ಪೂರ್ಣ ಪ್ರಮಾಣದ ರಂಗಶಿಕ್ಷಣವನ್ನು ನೀಡುವ ಸಂಸ್ಥೆಯಾಗಿದೆ.**

ಈ ಸಂಸ್ಥೆ ಮೈಸೂರಿನ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಮಾನ್ಯತೆ ಪಡೆದಿದೆ. ಪ್ರತಿವರ್ಷ ರಂಗಶಿಕ್ಷಣದಲ್ಲಿ ಹತ್ತು ತಿಂಗಳ ಡಿಪ್ಲೊಮೊ ಕೋರ್ಸ್ನ್ನು ನಡೆಸುವ ಈ ಸಂಸ್ಥೆಯು 2026–27ನೇ ಸಾಲಿನ ಈ ರಂಗತರಬೇತಿ ಕೋರ್ಸ್ಗೆ




ಸೇರಬಯಸುವ ವಿದ್ಯಾರ್ಥಿಗಳು ರಂಗಭೂಮಿಯ ಪ್ರಾಥಮಿಕ ಅನುಭವ ಹೊಂದಿರಬೇಕು. ಕನಿಷ್ಠ ದ್ವಿತೀಯ ಪಿಯುಸಿ (10+2) ಅಥವಾ ತತ್ಸಮಾನ ಪರೀಕ್ಷೆ ತೇರ್ಗಡೆ ಹೊಂದಿರಬೇಕು. ವಯೋಮಿತಿ ಅರ್ಜಿ ಸಲ್ಲಿಸಲು ನಿಗದಿಗೊಳಿಸಿದ ಕಡೆಯ ದಿನಾಂಕಕ್ಕೆ 18 ವರ್ಷಗಳು ತುಂಬಿದ ಮತ್ತು 28 ವರ್ಷಗಳು ತುಂಬಿರದ ಅಭ್ಯರ್ಥಿಗಳಾಗಿರಬೇಕು. ಆಯ್ಕೆಯಾದ ವಿದ್ಯಾರ್ಥಿಗಳಿಗೆ ಕೋರ್ಸಿನ ಒಂದು ವರ್ಷದ ವ್ಯಾಸಂಗ ಅವಧಿಯಲ್ಲಿ ಊಟ, ವಸತಿ ಹಾಗೂ ಪಠ್ಯ ಸಾಮಗ್ರಿಗಳ ವೆಚ್ಚಗಳನ್ನು ನಿಯಮಾನುಸಾರ ವಿದ್ಯಾರ್ಥಿ ವೇತನದಲ್ಲಿ ಭರಿಸಲಾಗುವುದು.

ಭಾರತೀಯ ರಂಗಶಿಕ್ಷಣ ಕೇಂದ್ರಕ್ಕೆ ಸೇರಬಯಸುವ ವಿದ್ಯಾರ್ಥಿಗಳು ದಿನಾಂಕ: 15.05.2026 ರಿಂದ ರಂಗಾಯಣದ ವೆಬ್‌ಸೈಟ್ ವಿಳಾಸ: http://rangayanamysore.karnataka.gov.in ನಲ್ಲಿ ಅರ್ಜಿ ಡೌನ್‌ಲೋಡ್ ಮಾಡಿಕೊಂಡು ಅಥವಾ ರಂಗಾಯಣದ ಕಚೇರಿ ಅವಧಿಯಲ್ಲಿ ಖುದ್ದಾಗಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಅರ್ಜಿ ಶುಲ್ಕ ಸಾಮಾನ್ಯ ವರ್ಗ 300 ರೂ., ಪ.ಜಾ, ಪ.ವರ್ಗ ಮತ್ತು ಪ್ರವರ್ಗ–1 ಅಭ್ಯರ್ಥಿಗಳಿಗೆ 200 ರೂ.ಗಳು (ರಂಗಕೈಪಿಡಿ ಶುಲ್ಕ 30 ರೂ. ಒಳಗೊಂಡಂತೆ) ಡಿ.ಡಿ.ಯನ್ನು ಉಪ ನಿರ್ದೇಶಕರು, ರಂಗಾಯಣ, ಮೈಸೂರು ಇವರ ಹೆಸರಿನಲ್ಲಿ ಪಡೆದು ರಂಗಾಯಣದ ವಿಳಾಸಕ್ಕೆ ದಿನಾಂಕ:20.06.2026ರ ಸಂಜೆ 5.30ರೊಳಗೆ ತಲುಪುವಂತೆ ಅಂಚೆಯ ಮೂಲಕ ಕಳುಹಿಸಬಹುದು.

ಸಂದರ್ಶನದ ದಿನಾಂಕವನ್ನು ಅಭ್ಯರ್ಥಿಗಳಿಗೆ ಪತ್ರ ಮುಖೇನ ತಿಳಿಸಲಾಗುವುದು. ರಂಗಾಯಣದ ಆವರಣದಲ್ಲಿ ನಡೆಯುವ ಈ ಸಂದರ್ಶನಕ್ಕೆ ವಿದ್ಯಾರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲೇ ಹಾಜರಾಗಬೇಕು. ಗ–ರಿಷ್ಠ 15 ರಿಂದ 20 ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶಾವಕಾಶವಿರುತ್ತದೆ. ಸಂದರ್ಶನದ ದಿನ ಮಧ್ಯಾಹ್ನ ಲಘು ಉಪಹಾರದ ವ್ಯವಸ್ಥೆಯನ್ನು ಮಾತ್ರ ರಂಗಾಯಣದಿಂದ ಮಾಡಲಾಗುವುದು. ಯಾವುದೇ ವಸತಿ ವ್ಯವಸ್ಥೆ ಇರುವುದಿಲ್ಲ. ಹೆಚ್ಚಿನ ವಿವರಕ್ಕಾಗಿ ದೂರವಾಣಿ ಸಂಖ್ಯೆ:0821–2512639ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮೈಸೂರಿನ ರಂಗಾಯಣದ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101 KARNATAKA, EDITOR BY: IRFAN K PH NO.